ಜನಮನದ ದನಿ


# ಪ್ರಜೋದಯ

ಸಂಪಾದಕ : ಜಿ.ಆರ್. ಕೆಂಚೇಗೌಡ


ದಕ್ಷಿಣ ಆಫ್ರಿಕಾ ವೇಗಿ ಮಾರ್ಕೊ ಯಾನ್ಸನ್ ಮಾರಕ ಬೌಲಿಂಗ್ ದಾಳಿಗೆ ನಲುಗಿದ ಭಾರತ ತಂಡ 201 ರನ್ ಗಳಿಗೆ ಆಲೌಟ್... ಯಾನ್ಸನ್ 6 ವಿಕೆಟ್...




25 ನವೆಂಬರ್ 2025 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 254 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629


ಆಧುನಿಕ ಯುಗದ ಭಗೀರಥರಿಗೆ ಶರಣು... » 2





ಹಿರಿಯ ನಾಗರಿಕರಿಗೆ ಗೌರವ ನೀಡಬೇಕು » 3





ಕಾಂಗ್ರೆಸ್‌ನಿಂದ ಶಾಸಕರ ಖರೀದಿ ಭರಾಟೆ: ಆರ್.ಅಶೋಕ್ » 4


# ಹೈಕಮಾಂಡ್ ನಿರ್ಧಾರ ಇಬ್ಬರೂ ಒಪ್ಪಬೇಕು: ಸಿಎಂ

## ಸಿದ್ದರಾಮಯ್ಯ ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ | ಶಾಸಕರ ಖರೀದಿ ಬಿಜೆಪಿ ಸಂಸ್ಕೃತಿಯೆಂದು ತಿರುಗೇಟು

• ಪ್ರಜೋದಯ ವರದಿ

**ಬೆಂಗಳೂರು:** ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ಅಂತಿಮವಾಗಿ ನಿರ್ಧರಿಸುತ್ತದೆ. ಹೈಕಮಾಂಡ್ ಏನೇ ನಿರ್ಧಾರ ತೆಗೆದುಕೊಂಡರೂ, ನಾನು ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅದನ್ನು ಒಪ್ಪಿಕೊಳ್ಳಬೇಕೆಂದುಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಅದಕ್ಕೆ ಸಹಮತ ವ್ಯಕ್ತಪಡಿಸಿರುವ ಡಿ.ಕೆ.ಶಿವಕುಮಾರ್ ಅವರು, ಸಿದ್ದರಾಮಯ್ಯ ಅವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ ಎಂದಿದ್ದಾರೆ.

**ಹೈಕಮಾಂಡ್ ನಿರ್ಧರಿಸಿದ್ರೆ, ಮುಂದುರೆಯುವೆ**

ಸೋಮವಾರ ಚಿಕ್ಕಬಳ್ಳಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಾಯಕತ್ವ ಬದಲಾವಣೆಯ ಬಗ್ಗೆ ಹೈಕಮಾಂಡ್ ಏನೇ ನಿರ್ಧಾರ ತೆಗೆದುಕೊಂಡರೂ, ಅದನ್ನು ನಾನು ಮತ್ತು ಡಿ.ಕೆ.ಶಿವಕುಮಾರ್ ಬದ್ಧರಾಗಿರುತ್ತೇವೆ. ಅವರು ನಾನು (ಮುಖ್ಯಮಂತ್ರಿಯಾಗಿ) ಮುಂದುವರಿಯಬೇಕೆಂದು ನಿರ್ಧರಿಸಿದರೆ, ನಾನು ಮುಂದುವರಿಯುತ್ತೇನೆ. ಅಂತಿಮವಾಗಿ, ಹೈಕಮಾಂಡ್ ಏನು ನಿರ್ಧರಿಸುತ್ತದೆಯೋ, ಅದನ್ನು ನಾನು ಒಪ್ಪಿಕೊಳ್ಳಬೇಕು. ಶಿವಕುಮಾರ್ ಕೂಡ ಅದನ್ನು ಒಪ್ಪಿಕೊಳ್ಳಬೇಕು ಎಂದು ತಿಳಿಸಿದರು.

ಶಿವಕುಮಾರ್ ಮುಖ್ಯಮಂತ್ರಿ ಆಗುತ್ತಾರೆಯೇ ಎಂದು ಕೇಳಿದಾಗ, ಆ ಬಗ್ಗೆ ಹೈಕಮಾಂಡ್ ನಿರ್ಧಾರ ಕೈಗೊಳ್ಳುತ್ತದೆ ಎಂದು ನಾನು ಹೇಳಿದರೂ, ಮತ್ತೆ ಅದೇ ವಿಷಯವನ್ನು ಏಕೆ ಕೇಳುತ್ತಿದ್ದೀರಿ. ನಾಲ್ಕೈದು ತಿಂಗಳ ಹಿಂದೆ, ಹೈಕಮಾಂಡ್ ಸಂಪುಟ ಪುನರಾಚನೆಗೆ ಒಪ್ಪಿಗೆ ಸೂಚಿಸಿತ್ತು. ಆದರೆ, ಸರ್ಕಾರ 2.5 ವರ್ಷಗಳ ಅಧಿಕಾರ ಪೂರ್ಣಗೊಳಿಸಲಿ ಎಂದು ಸೂಚಿಸಿದ್ದರು ಎಂದ ಸಿದ್ದರಾಮಯ್ಯ ಅವರು, ಈಗ ನಾವು ಹೈಕಮಾಂಡ್ ಏನು ನಿರ್ಧರಿಸುತ್ತದೆಯೋ ಅದನ್ನು ಅನುಸರಿಸುತ್ತೇವೆಂದು ಹೇಳಿದರು.

ಎರಡೂವರೆ ವರ್ಷಗಳ ಸರ್ಕಾರದ ನಂತರ ಅಧಿಕಾರ ಹಂಚಿಕೆಯ ಒಪ್ಪಂದವಾಗಿತ್ತೇ ಎಂದು ಕೇಳಿದಾಗ, ಹೈಕಮಾಂಡ್ ನಿರ್ಧಾರಕ್ಕೆ ಬದ್ಧರಾಗಿರುತ್ತೇನೆಂದು ಮಾತ್ರ ಹೇಳಿದರು.

**ಡಿ.ಕೆ.ಶಿವಕುಮಾರ್ ಪ್ರತಿಕ್ರಿಯೆ**

ಶಿಡ್ಲಘಟ್ಟದಲ್ಲಿ ಸುದ್ದಿಗಾರರೊಂದಿಗೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಿದ್ದರಾಮಯ್ಯ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ಅವರು ಹೇಳಿದ ಮೇಲೆ ಅದೇ ನಮಗೆ ವೇದವಾಕ್ಯ ಎಂದು ತಿಳಿಸಿದರು.



ಕಾಂಗ್ರೆಸ್ ಶಾಸಕರನ್ನು ಕಾಂಗ್ರೆಸ್ ಪಕ್ಷದ ನಾಯಕರೇ ಖರೀದಿ ಮಾಡುವ ಪರಿಸ್ಥಿತಿ ಬಂದಿದೆ ಎಂಬ ಬಿಜೆಪಿ ನಾಯಕರ ಹೇಳಿಕೆ ಪ್ರತಿ ಕ್ರಿಯಿಸಿ, ಶಾಸಕರ ಖರೀದಿ ಹಾಗು ಕುದುರೆ ವ್ಯಾಪಾರ ಬಿಜೆಪಿ ಸಂಸ್ಕೃತಿ. ಈ ಹಿಂದೆ ಬಿಜೆಪಿ ಸರ್ಕಾರ ರಚನೆಯಾದಾಗ ಅವರು ಎಷ್ಟು ಸಾವಿರ ಕೋಟಿ ಖರ್ಚು ಮಾಡಿದ್ದರು. ಮುಖ್ಯ ಮಂತ್ರಿ ಹುದ್ದೆಗೆ ಎಷ್ಟು ಹಣ ನೀಡಬೇಕಾಗಿತ್ತು, ಮಂತ್ರಿ ಹುದ್ದೆಗೆ ಎಷ್ಟು ಹಣ ನೀಡಲಾಗಿದೆ ಎಂದು ಅವರದೇ ಪಕ್ಷದ ನಾಯಕರು ಬಹಿರಂಗ ಹೇಳಿಕೆ ನೀಡಿದ್ದಾರೆ. ಅವರು ಎಷ್ಟು ಹಣ ಆಮಿಷ ಒಡ್ಡಿದ್ದರೆಂದು ವಿಧಾನಸಭೆಯಲ್ಲೂ ಪ್ರಸ್ತಾಪವಾಗಿದ್ದು, ದಾಖಲೆಗಳಲ್ಲಿ ಸೇರಿವೆ. ಈಗ ಬಿಜೆಪಿಯವರು ತಮ್ಮ ಪ್ರವೃತ್ತಿ ಯನ್ನು ನೆನೆಸಿಕೊಳ್ಳುತ್ತಿದ್ದಾರೆಂದು ಹರಿಹಾಯ್ದರು.

ವಿರೋಧ ಪಕ್ಷಗಳು ಹಗಲುಗನಸು ಕಾಣುವುದನ್ನು ಬಿಡಬೇಕು. 2028ಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬಂದು ಜನಸೇವೆ ಮುಂದುವರೆಸಲಿದೆ. ರಾಜ್ಯದಲ್ಲಿ ಅಭಿವೃದ್ಧಿ ಸಂಗಮವಾಗಿದೆ. 2 ಸಾವಿರ ಕೋಟಿ ರೂ. ಮೊತ್ತದ ಅಭಿವೃದ್ಧಿ ಕೆಲಸವನ್ನು ವಿರೋಧ ಪಕ್ಷದ ಶಾಸಕರ ಕ್ಷೇತ್ರಕ್ಕೆ ಕಾಂಗ್ರೆಸ್ ಸರ್ಕಾರ ನೀಡುತ್ತಿದೆ ಎಂದರೆ ನಮ್ಮ ಜನಪರ ಧೋರಣೆಯನ್ನು ಎಲ್ಲರೂ ಅರ್ಥ ಮಾಡಿಕೊಳ್ಳಬೇಕೆಂದು ಹೇಳಿದರು.

### ಅಧಿಕಾರ ಹಂಚಿಕೆ ಗುದ್ದಾಟ ದೆಹಲಿಗೆ ಶಿಫ್ಟ್

ಕರ್ನಾಟಕ ಕಾಂಗ್ರೆಸ್‌ನ ಅಧಿಕಾರ ಹಂಚಿಕೆ ಗುದ್ದಾಟ ದೆಹಲಿಗೆ ಶಿಫ್ಟ್ ಆಗಲಿದೆ. ಮಂಗಳವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಗೆ ವಾಪಾಸ್ ಆಗುತ್ತಿದ್ದು, ಸಂಜೆಯೇ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗುವ ಸಾಧ್ಯತೆ ಇದೆ. ರಾಹುಲ್ ಗಾಂಧಿ ಮುಂದೆ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ರಾಜ್ಯದಲ್ಲಾಗಿರುವ ಬೆಳವಣಿಗೆ ಕುರಿತು ಚರ್ಚೆ ನಡೆಸಲಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅಭಿಪ್ರಾಯದ ಮೇಲೆ ರಾಹುಲ್ ಗಾಂಧಿ ಅವರು ಯಾವ ತೀರ್ಮಾನ ತೆಗೆದುಕೊಳ್ಳುತ್ತಾರೆ ಎಂಬುದು ಕುತೂಹಲ ಮೂಡಿಸಿದೆ. ಒಂದು ವೇಳೆ ಹೈಕಮಾಂಡ್ ಸದ್ಯಕ್ಕೆ ತೀರ್ಮಾನ ಕಷ್ಟ ಎನ್ನಿಸಿದರೆ, ಈ ವಾರಾಂತ್ಯದಲ್ಲಿ ಸಿಎಂ, ಡಿಸಿಎಂ ಕರೆದು ಚರ್ಚಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

# ಡಿ.ಕೆ.ಶಿವಕುಮಾರ್ ಪರ 63 ಶಾಸಕರು: ಗುಪ್ತಚರ ಮಾಹಿತಿ

## ಸಿದ್ದರಾಮಯ್ಯ ವಿರುದ್ಧ ಬಲ ಪ್ರದರ್ಶನಕ್ಕೆ ಶಾಸಕರ ತಂಡ ದೆಹಲಿಗೆ

• ಪ್ರಜೋದಯ ವರದಿ

**ಬೆಂಗಳೂರು:** ಪ್ರಭಾವಿ ಸಚಿವರೂ ಸೇರಿ 63 ಶಾಸಕರು ಉಪಮುಖ್ಯಮಂತ್ರಿ, ಡಿ.ಕೆ.ಶಿವಕುಮಾರ್ ಅವರ ಬೆಂಬಲಕ್ಕೆ ಇದ್ದಾರೆಂದು ರಾಜ್ಯ ಗುಪ್ತಚರ ವಿಭಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾಹಿತಿ ಮತ್ತು ಪಟ್ಟಿ ತಲುಪಿಸಿದೆ.

ಡಿ.ಕೆ.ಶಿವಕುಮಾರ್ ಅವರ ಬೆಂಬಲಕ್ಕೆ ಮೈಸೂರು, ಚಾಮರಾಜನಗರ ಜಿಲ್ಲೆಯಲ್ಲಿ ಕೇವಲ ಒಬ್ಬ ಶಾಸಕರನ್ನು ಹೊರತುಪಡಿಸಿ ಹೆಚ್ಚಿನ ಬೆಂಬಲಿತರು ಇಲ್ಲ, ಉತ್ತರ ಕರ್ನಾಟಕ ಭಾಗದ ವೀರಶೈವ ಶಾಸಕರು ಉಪಮುಖ್ಯಮಂತ್ರಿ ಪರ ನಿಂತಿದ್ದಾರೆ.

**ಗೌಪ್ಯ ಭೇಟಿ-ಮಾತುಕತೆ**

ಈಗಾಗಲೇ ಬಹುತೇಕ ಸಚಿವರು ಮತ್ತು ಶಾಸಕರು ಗೌಪ್ಯವಾಗಿ ಶಿವಕುಮಾರ್ ಭೇಟಿ ಮಾಡಿ ಮಾತುಕತೆ ನಡೆಸಿರು ವುದಲ್ಲದೆ, ಅವರಿಗೆ ಬೆಂಬಲ ವ್ಯಕ್ತಪಡಿಸಿದ್ದಾರೆ.

ದೊಡ್ಡ ಪ್ರಮಾಣದಲ್ಲಿ ತಮಗೆ ಶಾಸಕರ ಬೆಂಬಲ ದೊರೆಯುತ್ತಿದ್ದಂತೆ, ಶಿವಕುಮಾರ್ ವರಿಷ್ಠರ ಮುಂದೆ ಬಲ ಪ್ರದರ್ಶನಕ್ಕೆ ತಂಡೋಪ ತಂಡವಾಗಿ ಬೆಂಬಲಿತ ಶಾಸಕರನ್ನು ದೆಹಲಿಯ ವರಿಷ್ಠರ ಭೇಟಿಗೆ ಕಳುಹಿಸುತ್ತಿದ್ದಾರೆ.

ಸಚಿವ ಚಲುವರಾಯಸ್ವಾಮಿ ನಾಯಕತ್ವದಲ್ಲಿ ಕಳೆದ ಗುರುವಾರ ಆಯ್ದ



ಶಾಸಕರು ದೆಹಲಿಗೆ ತೆರಳಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭೇಟಿ ಮಾಡಿ ವರಿಷ್ಠರ ಸೂತ್ರದಂತೆ ಶಿವಕುಮಾರ್ ಅವರಿಗೆ ಅಧಿಕಾರ ಕೊಡಬೇಕೆಂದು ಮನವಿ ಮಾಡಿದ್ದರು.

**9 ಶಾಸಕರು ತಡರಾತ್ರಿ ದೆಹಲಿಗೆ**

ಇದೀಗ ಶರತ್ ಬಚ್ಚೇಗೌಡ ನಾಯಕತ್ವದಲ್ಲಿ 9 ಶಾಸಕರು ಭಾನುವಾರ ತಡರಾತ್ರಿ ದೆಹಲಿಗೆ ತೆರಳಿ, ಇಂದು ವರಿಷ್ಠರನ್ನು ಭೇಟಿ ಮಾಡಿ ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಮಾಡಿ ಎಂದು ಕೋರಿದ್ದಾರೆ.

ಬಚ್ಚೇಗೌಡ ಜೊತೆ ಶ್ರೀನಿವಾಸ ಮಾನೆ, ನಯನಾ ಮೋಟಮ್ಮ, ಬಸವರಾಜ್ ಶಿವಗಂಗಾ, ಕದಲೂರು ಉದಯ್, ಬಾಲಕೃಷ್ಣ, ಇಕ್ಬಾಲ್ ಹುಸೇನ್ ಸೇರಿ 9 ಮಂದಿ ದೆಹಲಿಯಲ್ಲಿ ಬಿಡಾರ ಹೂಡಿದ್ದಾರೆ.

ಮಂಥರ್‌ಗೌಡ ಹಾಗು ತಮ್ಮಯ್ಯ ನಾಯಕತ್ವದಲ್ಲಿ 13 ಮಂದಿ ಮೊದಲ ಬಾರಿಗೆ ಆಯ್ಕೆಗೊಂಡಿರುವ ಶಾಸಕರು ಸೋಮವಾರ ತಡರಾತ್ರಿ ಅಥವಾ ಮಂಗಳವಾರ ದೆಹಲಿ ಯಾತ್ರೆ ಕೈಗೊಂಡು ವರಿಷ್ಠರನ್ನು ಭೇಟಿ ಮಾಡಿ ಶಿವಕುಮಾರ್ ಅವರಿಗೆ ಅಧಿಕಾರ ಕೊಡಿ ಎಂದು ಒತ್ತಾಯಿಸಲಿದ್ದಾರೆ.

**ಅವರ ಬಳಿ ಬೆರಳೆಣಿಕೆ ಶಾಸಕರು**

ಶಿವಕುಮಾರ್ ಅವರಿಗೆ ಶಾಸಕರ ಬೆಂಬಲ ಇಲ್ಲ, ಅವರ ಬಳಿ ಬೆರಳೆಣಿಕೆಯಷ್ಟು ಸದಸ್ಯರಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದರು.

ಮುಖ್ಯಮಂತ್ರಿ ಹೇಳಿಕೆ ಸುಳ್ಳು ಮಾಡುವುದು, ತಮಗೆ ಶಾಸಕಾಂಗ ಪಕ್ಷದಲ್ಲಿ ಬಹುಮತ ಇದೆ ಎಂದು ಸಾಬೀತು ಪಡಿಸಲು, ಪರೋಕ್ಷವಾಗಿ ತಂಡೋಪ ತಂಡದಲ್ಲಿ ತಮ್ಮ ಬೆಂಬಲಿತ ಶಾಸಕರನ್ನು ದೆಹಲಿಗೆ ತೆರಳುವಂತೆ ಶಿವಕುಮಾರ್ ಮಾಡುತ್ತಿದ್ದಾರೆ.

ಅಧಿಕಾರ ಹಸ್ತಾಂತರಕ್ಕೆ ಸಂಬಂಧಿಸಿದಂತೆ ವರಿಷ್ಠರ ನಿರ್ಧಾರವೇ ಅಂತಿಮ ಎಂಬುದಾಗಿ ಸಿದ್ದರಾಮಯ್ಯ ಪದೇ ಪದೇ ಹೇಳುತ್ತಿದ್ದರೂ ಉಪಮುಖ್ಯಮಂತ್ರಿ ಮಾತ್ರ ಶಾಸಕರ ಬಲ ಹೆಚ್ಚಿಸಿಕೊಳ್ಳುವ ಕಸರತ್ತು ಮುಂದುವರೆಸಿದ್ದಾರೆ.


» ನಾಲ್ಕನೇ ಪುಟದಲ್ಲಿ


# ಕಟ್ಟಾಯ ಹೋಬಳಿ ವ್ಯಾಪ್ತಿಯಲ್ಲಿ ಹಲವು ಕಾಮಗಾರಿಗೆ ಚಾಲನೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಕಟ್ಟಾಯ ಹೋಬಳಿ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಂಡ ಶಾಸಕ ಸಿಮೆಂಟ್ ಮಂಜು ಅವರು ಹಲವು ಗ್ರಾಮಗಳಲ್ಲಿ 1 ಕೋಟಿ ರೂ. ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಿದರು.

ಹನುಮಂತಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಕ್ಕಬಾಗನಹಳ್ಳಿ ಗ್ರಾಮದ ಪರಿಮಿತಿ ಯಲ್ಲಿ 16 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಮತ್ತು ಒಳಚರಂಡಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ, ಗ್ರಾಮದಲ್ಲಿ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳು ಹಾಗು ಕುಂದು ಕೊರತೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಚನ್ನಂಗಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 10 ಲಕ್ಷ ರೂ. ವೆಚ್ಚದಲ್ಲಿ ಲಕ್ಕನಾಯಕನ ಹಳ್ಳಿಯಿಂದ ದೊಡ್ಡ ಬೀಕನಹಳ್ಳಿ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಇದೇ



ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿತ್ತಾನೆ ಗ್ರಾಮ ವ್ಯಾಪ್ತಿಯ ಆಯ್ದ ಭಾಗಗಳಲ್ಲಿ 23 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಮತ್ತು ಒಳಚರಂಡಿ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ಈ ವೇಳೆ ಮಾತನಾಡಿದ ಅವರು, ಪ್ರಧಾನಮಂತ್ರಿ ಜಲ್ ಜೀವನ್ ಮಿಷನ್ ಯೋಜನೆಯಡಿ ಶುದ್ಧ ಕುಡಿಯುವ ನೀರಿನ ಯೋಜನೆಯನ್ನು ಪೂರ್ಣ ಗೊಳಿಸಿ ಗ್ರಾಮಸ್ಥರಿಗೆ ಶೀಘ್ರವಾಗಿ ಲಭ್ಯ ಮಾಡಿಕೊಡಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಿತ್ತಾನೆ-ದೊಡ್ಡಬೀಕನಹಳ್ಳಿ ಗ್ರಾಮದ ಮಧ್ಯೆ ಕವಳಿಕೆರೆ ಕೋಡಿ ಮಳೆಗಾಲದಲ್ಲಿ ಅತಿ ಹೆಚ್ಚು ನೀರಿನ ಹರಿವಿನಿಂದಾಗಿ ಹೊಲಗದ್ದೆಗಳಿಗೆ ನೀರು ನುಗ್ಗಿ ಬೆಳೆ ಹಾನಿಯಾಗುತ್ತಿದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾಲುವೆ ಉನ್ನತೀಕರಣ ಮತ್ತು ಕಿರುಸೇತುವೆ ನಿರ್ಮಾಣದ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು ಹಾಗು ಗ್ರಾಮಸ್ಥರು ಜೊತೆಗಿದ್ದರು.

ಬಾಚಿಹಳ್ಳಿ ಗ್ರಾಮದಲ್ಲಿ 11 ಲಕ್ಷ ರೂ. ವೆಚ್ಚದಲ್ಲಿ


» ನಾಲ್ಕನೇ ಪುಟದಲ್ಲಿ


## ತಾಲ್ಲೂಕು ಪಂಚಾಯಿತಿ ಕೆಡಿಪಿ ಸಭೆಯಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಸೂಚನೆ

# ಬೀದಿನಾಯಿಗಳ ಹಾವಳಿಗೆ ಕಡಿವಾಣ ಹಾಕಿ

• ಪ್ರಜೋದಯ ವರದಿ

**ಹಾಸನ:** ಸುಪ್ರೀಂಕೋರ್ಟ್ ಆದೇಶದಂತೆ ತಾಲ್ಲೂಕಿನಾದ್ಯಂತ ಸಾರ್ವಜನಿಕ ಸ್ಥಳ ಹಾಗು ಸರ್ಕಾರಿ ಕಚೇರಿಗಳ ಸುತ್ತಮುತ್ತ ಬೀದಿನಾಯಿಗಳ ಹಾವಳಿಗೆ ಕಡಿವಾಣ ಹಾಕಬೇಕೆಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಸೂಚನೆ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೀದಿನಾಯಿಗಳ ಹಾವಳಿಯಿಂದ ತಾಲ್ಲೂಕಿನಲ್ಲಿ ಸಾಕಷ್ಟು ಸಮಸ್ಯೆಯಾಗುತ್ತಿದೆ. ಚದಕ್ಕೆ ಪೂರಕವಾಗಿ ಕೋರ್ಟ್ ಕೂಡ ಬೀದಿನಾಯಿಗಳ ಹಾವಳಿ ನಿಯಂತ್ರಣಕ್ಕೆ ಸೂಚನೆ ನೀಡಿದ್ದು ಕೂಡಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ನಾಯಿಗಳ ಸ್ಥಳಾಂತರಕ್ಕೆ ಕ್ರಮ ವಹಿಸಬೇಕೆಂದು ತಿಳಿಸಿದರು.

ನಗರ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆ ಅಧಿಕಾರಿಗಳು ಶೀಘ್ರವೇ ಕಾರ್ಯಪ್ರವೃತ್ತರಾಗಿ ಹಿಡಿದ ನಾಯಿಗಳನ್ನು ಬಿಡಲು ಶೆಡ್ ನಿರ್ಮಾಣ ಮಾಡಿ, ಬೀದಿನಾಯಿಗಳನ್ನು ಆ ಶೆಡ್‌ನಲ್ಲಿ ಬಿಟ್ಟು ಹಾರೈಕೆ ಮಾಡುವ ಕೆಲಸ ಮಾಡಬೇಕಿದೆ ಎಂದು ಹೇಳಿದರು.



ಕಂದಾಯ ಇಲಾಖೆ, ಸೆಸ್ಕಾಂ, ಮುಜರಾಯಿ, ಕೃಷಿ ತೋಟಗಾರಿಕೆ ಇಲಾಖೆಗಳು ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಜೊತೆಗೆ ಬೇಸಿಗೆ ಆರಂಭವಾಗುವ ಮುನ್ನವೇ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ಅದಕ್ಕೆ ಅಗತ್ಯವಿರುವ ಪೂರಕ ಕಾಮಗಾರಿಗಳನ್ನು ನಡೆಸಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕೆಲಸ ಮಾಡಬೇಕೆಂದು ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಕೊಳಚರಂಡಿಗಳು ಹೂಳು ಹಾಗು ಕಸ ಕಡ್ಡಿಗಳಿಂದ ತುಂಬಿ ಭರ್ತಿ ಯಾಗಿವೆ. ಕೂಡಲೇ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ, ಹೂಳು ತೆಗೆಯುವ ಕೆಲಸ ಮಾಡಬೇಕು. ಜೊತೆಗೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡುವ ಸಲುವಾಗಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಿ ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕೆಂದು ಸಲಹೆ ನೀಡಿದರು.

### ನರೇಗಾ ಕಾಮಗಾರಿಗೆ ಒತ್ತು ನೀಡಿ

ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಕಡ್ಡಾಯವಾಗಿ ನರೇಗಾ ಕಾಮಗಾರಿಗಳನ್ನು ಮಾಡಬೇಕು ಅದರಿಂದ ಗ್ರಾಮೀಣ ಜನರಿಗೆ ಉದ್ಯೋಗ ಹಾಗು ಪಂಚಾಯಿತಿ ವ್ಯಾಪ್ತಿಯ ಅಭಿವೃದ್ಧಿ ಕೆಲಸಗಳಿಗೆ ಹೆಚ್ಚಿನ ಒತ್ತು ನೀಡಿದಂತೆ ಆಗುತ್ತದೆ. ಕೇಂದ್ರ ಹಾಗು ರಾಜ್ಯ ಸರ್ಕಾರದ ಯಾವುದೇ ಯೋಜನೆಗಳು ವಿಫಲವಾಗ ಬಾರದು ಅವುಗಳನ್ನು ಸರಿಯಾಗಿ ಬಳಕೆ ಮಾಡಿಕೊಂಡು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕೆಲಸವನ್ನು ಮಾಡಬೇಕಿದೆ ಎಂದು ಶಾಸಕರು ತಿಳಿಸಿದರು.

**ಅಂಗನವಾಡಿಗೆ ಟಿ.ವಿ. ವಿತರಣೆ**

ಸಭೆಯಲ್ಲಿ ಹಾಸನ ತಾಲ್ಲೂಕಿನ 178 ಅಂಗನವಾಡಿಗಳನ್ನು ಸಕ್ಷಮ ಅಂಗನವಾಡಿಗಳಾಗಿ ಗುರುತಿಸಲಾಗಿದ್ದು ಈ ಪೈಕಿ ಹಾಸನದ 10 ಅಂಗನವಾಡಿಗಳು ಇವೆ. ನ.28 ರಿಂದ ಆರಂಭ ವಾಗುತ್ತಿರುವ ಹಿನ್ನಲೆ ಅಂಗನವಾಡಿಗಳಿಗೆ ಟಿ.ವಿ.ಗಳನ್ನು ಶಾಸಕ ಸ್ವರೂಪ್ ಅವರು ವಿತರಿಸಿ ದರು. ಟಿವಿ ಮೂಲಕ ಶಾಲಾ ಪೂರ್ವ ಶಿಕ್ಷಣ ಹಾಗು ತಾಂತ್ರಿಕ ಶಿಕ್ಷಣದ ಬಗ್ಗೆ ಒದಗಿಸುವ ಉದ್ದೇಶ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಸಭೆಯಲ್ಲಿ ತಹಶೀಲ್ದಾರ್ ಗೀತಾ, ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಗಿರೀಶ್, ನಾಮನಿರ್ದೇಶಕ ಸದಸ್ಯರಾದ ಮಲ್ಲೇಗೌಡ, ಕರೀಗೌಡ, ಇತರೆ ಅಧಿಕಾರಿಗಳು ಇದ್ದರು.

# ಕೌಟುಂಬಿಕ ಕಲಹ: ದಂಪತಿ ಜಲ ಸಮಾಧಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಕೌಟುಂಬಿಕ ಕಲಹದಿಂದ ಬೇಸತ್ತು ನಾಲೆಗೆ ಹಾರಿದ ಪತ್ನಿಯನ್ನು ರಕ್ಷಿಸಲು ತೆರಳಿದ ಪತಿಯು ಮುಳುಗಿ ಇಬ್ಬರೂ ಮೃತಪಟ್ಟಿರುವ ಘಟನೆ ತಾಲ್ಲೂಕಿನ ನಂಬಿಹಳ್ಳಿ ಗ್ರಾಮದಲ್ಲಿ ಭಾನವಾರ ನಡೆದಿದೆ.

ಗ್ರಾಮದ ಗೋಪಾಲ್ (27) ಹಾಗು ಪತ್ನಿ ದೀಪ (24) ಮೃತರು. ಒಂದು ವರ್ಷದ ಹಿಂದಷ್ಟೇ ಮದುವೆಯಾಗಿದ್ದ ದಂಪತಿ ಸಣ್ಣಪುಟ್ಟ ವಿಚಾರಕ್ಕೆ ಗಲಾಟೆ ಮಾಡಿಕೊಳ್ಳುತ್ತಿದ್ದರು. ಭಾನುವಾರ ಬೆಳಿಗ್ಗೆ ಗಂಡನ ಜೊತೆ ಜಗಳವಾಡಿದ ದೀಪ ಆತ್ಮಹತ್ಯೆಯ ನಿರ್ಧಾರದಿಂದ ಗ್ರಾಮ ಸಮೀಪದಲ್ಲೇ ಹಾದು ಹೋಗಿರುವ ಹೇಮಾವತಿ ನಾಲೆಗೆ ಹಾರಿದ್ದಾಳೆ. ಪತ್ನಿಯನ್ನು ಉಳಿಸಿಕೊಳ್ಳಲು ಗೋಪಾಲ್ ಸಹ ನಾಲೆಗೆ ಹಾರಿದ್ದು ರಭಸವಾಗಿ ಹರಿಯುತ್ತಿದ್ದ ನೀರಿನಲ್ಲಿ ಈಜಿ ದಡ ಸೇರಲು ಸಾಧ್ಯವಾಗದೆ ಜಲ ಸಮಾಧಿ ಆಗಿದ್ದಾರೆ.

ವಿಷಯ ತಿಳಿಯುತ್ತಿದ್ದಂತೆ ಪೊಲೀಸರು ಹಾಗು ಅಗ್ನಿ ಶಾಮಕ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿ ಕಾರ್ಯಾಚರಣೆ ನಡೆಸಿದರು. ತಾಲ್ಲೂಕಿನ ದಿಂಡಗೂರು ಗ್ರಾಮದ ಬಳಿ ನಾಲೆಯಲ್ಲಿ ಗೋಪಾಲ್ ಮೃತದೇಹ ಪತ್ತೆಯಾಗಿದೆ. ದೀಪಾ ಮೃತದೇಹಕ್ಕಾಗಿ ಶೋಧ ಕಾರ್ಯ ಮುಂದುವರಿದಿದೆ.

# ಜೋಳಕ್ಕೆ 3 ಸಾವಿರ ರೂ. ಬೆಂಬಲ ಬೆಲೆ ನಿಗದಿಗೆ ಆಗ್ರಹ

## ಕೆಎಂಎಫ್ ಮೂಲಕ ಖರೀದಿಗೆ ಒತ್ತಾಯ | ರೈತ ಸಂಘದಿಂದ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಮೆಕ್ಕೆ ಜೋಳಕ್ಕೆ 3 ಸಾವಿರ ರೂ. ಬೆಂಬಲ ಬೆಲೆ ನಿಗದಿ ಮಾಡಬೇಕು, ಕೆಎಂಎಫ್ ಮೂಲಕ ಜೋಳ ಖರೀದಿಗೆ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ರಾಜ್ಯ ರೈತ ಸಂಘ, ಹಸಿರು ಸೇನೆ ನೇತೃತ್ವದಲ್ಲಿ ನೂರಾರು ರೈತರು ಸೋಮವಾರ ಪ್ರತಿಭಟನೆ ನಡೆಸಿದರು.

ನಗರದ ಹೇಮಾವತಿ ಪ್ರತಿಮೆ ಎದುರು ಜಮಾವಣೆಗೊಂಡ ರೈತರು ಹಾಗು ಮುಖಂಡರು ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಎನ್.ಆರ್.ವೃತ್ತದಲ್ಲಿ ಬೃಹತ್ ಮಾನವ ಸರಪಳಿ ರಚಿಸಿ, ವಾಹನ ಸಂಚಾರ ತಡೆ ನಡೆಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ಎದುರು ಕೆಲಕಾಲ ಧರಣಿ ನಡೆಸಿದರು.



ರೈತ ಮುಖಂಡ ಕಣಗಾಲ್ ಮೂರ್ತಿ ಅವರು ಮಾತನಾಡಿ, ಮೆಕ್ಕೆ ಜೋಳಕ್ಕೆ ಪ್ರಸ್ತುತ ಇರುವ 2,400 ರೂ. ರೈತರ ಖರ್ಚು ವೆಚ್ಚಕ್ಕೆ ಸಾಲದು. ಈಗಿನ ಪರಿಸ್ಥಿತಿಯಲ್ಲಿ 3000 ರೂ.ಗೆ ಏರಿಕೆ, ತಕ್ಷಣ ಖರೀದಿ ಕೇಂದ್ರಗಳ ಆರಂಭ ಮಾಡಬೇಕು, ಬೆಳೆ ನಷ್ಟ ಪರಿಹಾರ ತಕ್ಷಣ ಬಿಡುಗಡೆ ಮಾಡಬೇಕು,ಮಾರುಕಟ್ಟೆ ದುರೋಪಯೋಗಕ್ಕೆ ನಿಯಂತ್ರಣ ನೀತಿಗಳನ್ನು ತಕ್ಷಣ ಜಾರಿಗೆ ತರಬೇಕು. ಸರ್ಕಾರ ಶೀಘ್ರ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂದಿನದಿನಗಳಲ್ಲಿ ಹೋರಾಟ ತೀವ್ರ ಗೊಳಿಸುವುದಾಗಿ ಎಚ್ಚರಿಸಿದರು.

ರಾಜ್ಯದಲ್ಲಿ ಅಗತ್ಯ ಇರುವಷ್ಟು ಮೆಕ್ಕೆ ಜೋಳವನ್ನು ಬೆಳೆಯಲಾಗಿದೆ. ಬೇರೆ ದೇಶಗಳಿಂದ ಖರೀದಿ ಮಾಡಿದಂತಹ ಮೆಕ್ಕೆಜೋಳವನ್ನು


» ನಾಲ್ಕನೇ ಪುಟದಲ್ಲಿ


# ಸಿಎಂ ಭೇಟಿ: ಕಾಂಗ್ರೆಸ್ ಮುಖಂಡರೊಂದಿಗೆ ಸಭೆ

• ಪ್ರಜೋದಯ ವರದಿ

**ಹಾಸನ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.6ರಂದು ಜಿಲ್ಲೆಗೆ ಭೇಟಿ ನೀಡಲಿರುವ ಹಿನ್ನಲೆ ಸೋಮವಾರ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಬೆಂಗಳೂರಿನಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡರು, ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು.

ಡಿ.6 ರಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಹಾಗು ಜಿಲ್ಲೆಯಲ್ಲಿ ನೂತನವಾಗಿ ಗುರುತಿಸಿರುವ ಕಂದಾಯ ಗ್ರಾಮಗಳ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಜಿಲ್ಲೆಯ ಅಭಿವೃದ್ಧಿ ಪರವಾಗಿ ಮುಖ್ಯಮಂತ್ರಿ ಎದುರು ಜನಪ್ರತಿನಿಧಿಗಳು ಒಟ್ಟಾಗಿ ಮುಂದಿಡಬೇಕಾದ ಬೇಡಿಕೆಗಳ ಬಗ್ಗೆ ಸಭೆ ನಡೆಸಿ ಚರ್ಚಿಸಲಾಯಿತು.




ಸಭೆಯಲ್ಲಿ ಸಂಸದ ಶ್ರೇಯಸ್ ಪಟೇಲ್, ಗೃಹಮಂಡಳಿ ಅಧ್ಯಕ್ಷ ಕೆ.ಎಂ.ಶಿವಲಿಂಗೇಗೌಡ, ಮಾಜಿ ಸಚಿವ ಬಿ.ಶಿವರಾಮ್, ಹುಡಾ ಅಧ್ಯಕ್ಷ ಪಟೇಲ್ ಶಿವಪ್ಪ, ಮಾಜಿ ಶಾಸಕ ಪುಟ್ಟೇಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ಎ.ಗೋಪಾಲಸ್ವಾಮಿ, ಮುಖಂಡರಾದ ಹೆಚ್.ಕೆ.ಮಹೇಶ್, ಬಾಗೂರು ಮಂಜೇಗೌಡ, ಬನವಾಸೆ ರಂಗಸ್ವಾಮಿ, ಜಾವಗಲ್ ಪ್ರಸನ್ನ ಮತ್ತಿತರರು ಹಾಜರಿದ್ದರು.

# ಅನುದಾನಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿ: ಸಂಸದ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ಅಭಿವೃದ್ಧಿಗೆ ಹಂತ ಹಂತವಾಗಿ ಅನುದಾನಕ್ಕೆ ಅನುಗುಣವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಸಂಸದ ಶ್ರೇಯಸ್ ಪಟೇಲ್ ಅವರು ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ನಗರದಲ್ಲಿ ತಮ್ಮ ಸಂಸದರ ನಿಧಿಯಿಂದ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರೆವೇರಿಸಿ ಮಾತನಾಡಿದ ಅವರು, ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಿಸಿರುವ ಮನೆಗಳಿಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿಸದೆ ಇರುವುದರಿಂದ ಮನೆ ಕಾಮಗಾರಿ ಪೂರ್ಣಗೊಳಿಸಿಕೊಳ್ಳಲು ಸಾಧ್ಯವಾಗದೆ ಅತಂತ್ರ ಸ್ಥಿತಿಯಲ್ಲಿ ಫಲಾನುಭವಿಗಳಿದ್ದಾರೆ. ಈ ಕುರಿತು ಕೊಳಚೆ ನಿರ್ಮೂಲನಾ ಮಂಡಳಿ ಅಧಿಕಾರಿಗಳ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.



ಈ ಸಂದರ್ಭದಲ್ಲಿ ನೆರೆದಿದ್ದ ನಾಗರಿಕರ, ಪಟ್ಟಣದಲ್ಲಿ ಮೃತಪಟ್ಟವರ ಶವವನ್ನು ರುದ್ರ ಭೂಮಿಗೆ ಸಾಗಿಸುವ ಮಾರ್ಗದಲ್ಲಿ ರೈಲ್ವೆ ಹಳಿಗೆ ಅಡ್ಡಲಾಗಿ ಹಾಕಿರುವ ಕಬ್ಬಿಣದ ಕಂಬಗಳನ್ನು ತೆರವುಗೊಳಿಸಿ ಶವವನ್ನು ಸರಾಗವಾಗಿ ಕೊಂಡೊಯ್ಯಲು ಅವಕಾಶ ಕಲ್ಪಿಸಿ ಕೊಡಬೇಕೆಂದು ಮನವಿ ಮಾಡಿದರು.

ತಕ್ಷಣ ಕಾರ್ಯ ಪ್ರವೃತ್ತರಾದ ಸಂಸದರು ಸಂಬಂಧಪಟ್ಟ ರೈಲ್ವೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಈ ಕುರಿತು ತುರ್ತಾಗಿ ಅಗತ್ಯ ಕ್ರಮ ಕೈಗೊಂಡು ಶವವನ್ನು ಸರಾಗವಾಗಿ ಕೊಂಡೊಯ್ಯಲು ಅವಕಾಶ ಕಲ್ಪಿಸಬೇಕೆಂದು ತಿಳಿಸಿ, ಶವವನ್ನು ರುದ್ರ ಭೂಮಿಗೆ ರೈಲ್ವೆ ಹಳಿ ಮೂಲಕ ಸಾಗಿಸಲು ಕೇಂದ್ರ ರೈಲ್ವೆ ಇಲಾಖೆಯವರೊಂದಿಗೆ ಸಂಪರ್ಕದಲ್ಲಿದ್ದು 8 ಕೋಟಿಗೂ ಅಧಿಕ ವೆಚ್ಚದಲ್ಲಿ ಮೇಲ್ಸೇತುವೆ ನಿರ್ಮಿಸಲು ಎಲ್ಲಾ ರೀತಿಯಲ್ಲಿ ಪ್ರಯತ್ನ ಮುಂದುವರೆದಿದ್ದು ಸದ್ಯದಲ್ಲಿಯೇ ಈ ಕಾಮಗಾರಿ ಪ್ರಾರಂಭವಾಗುವುದೆಂದು ತಿಳಿಸಿದರು.


» ನಾಲ್ಕನೇ ಪುಟದಲ್ಲಿ


## ನ.28 ರಿಂದ ತರಗತಿ ಆರಂಭ | ಶಿಕ್ಷಕಿಯರಿಗೆ ತರಬೇತಿ, ಪಠ್ಯ ಪುಸ್ತಕ ವಿತರಣೆ

# ಜಿಲ್ಲೆಯ 100 ಅಂಗನವಾಡಿಗಳಲ್ಲಿ ಇಂಗ್ಲಿಷ್ ಮಿಡಿಯಂ

• ಪ್ರಜೋದಯ ವರದಿ

**ಹಾಸನ:** ಅಂಗನವಾಡಿ ಮಕ್ಕಳ ಕಲಿಕೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಲು ಸರ್ಕಾರ ಇಂಗ್ಲಿಷ್ ಮಾಧ್ಯಮ ಆರಂಭಕ್ಕೆ ಮುಂದಾಗಿದ್ದು ಜಿಲ್ಲೆಯ 100 ಅಂಗನವಾಡಿ ಕೇಂದ್ರ ಗಳಲ್ಲಿ ನ.28 ರಿಂದ ಇಂಗ್ಲಿಷ್ ಕಲಿಕೆ ಪ್ರಾರಂಭವಾಗಲಿದೆ.

ರಾಜ್ಯಾದ್ಯಂತ ಸಾವಿರ ಅಂಗನವಾಡಿಗಳಲ್ಲಿ ಇಂಗ್ಲಿಷ್ ಮಿಡಿಯಂ ಆರಂಭಿಸಲು ಕ್ರಮ ವಹಿಸಲಾಗಿದೆ. ಅದಕ್ಕಾಗಿ ಸ್ಮಾರ್ಟ್ ಟಿವಿ, ಪಠ್ಯ ಪುಸ್ತಕಗಳ ಪೂರೈಕೆಯಾಗಿದೆ. ಅಂಗನವಾಡಿ ಶಿಕ್ಷಕಿಯರಿಗೆ ಈಗಾಗಲೇ ತರಬೇತಿ ಸಹ ನೀಡಲಾಗಿದೆ. ನೂತನ ಯೋಜನೆಯಿಂದ ಸುಮಾರು 1,300 ಮಕ್ಕಳಿಗೆ ಅನುಕೂಲವಾಗಲಿದ್ದು, ಬಡ ಪೋಷಕರಿಗೆ ಖಾಸಗಿ ಶಾಲೆಗಳ ಭಾರ ತಪ್ಪಲಿದೆ.

ಜಿಲ್ಲೆಯ 8 ತಾಲ್ಲೂಕುಗಳಲ್ಲಿ ಒಟ್ಟು 2,691 ಅಂಗನವಾಡಿಗಳು ಕಾರ್ಯ ನಿರ್ವಹಿಸುತ್ತಿವೆ. ಈ ಪೈಕಿ ಆಯ್ದ



### ಬಹುತೇಕ ಕಡೆ ಸೌಕರ್ಯ ಕೊರತೆ

ಅಂಗನವಾಡಿಗಳ ಬಲವರ್ಧನೆಗಾಗಿ ಸರ್ಕಾರ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸುತ್ತಿ ದೆಯಾದರೂ ಬಹುತೇಕ ಕಡೆ ಮೂಲಸೌಕರ್ಯ ಕೊರತೆಯಿಂದ ಹಾಜರಾಗುವ ಮಕ್ಕಳ ಸಂಖ್ಯೆಗಣನೀಯ ಕುಸಿತವಾಗುತ್ತಿದೆ. ಖಾಸಗಿ ಶಾಲೆಗಳ ತೀವ್ರ ಪೈಪೋಟಿ ನಡುವೆ ಅಂಗನವಾಡಿ ಗಳ ಉಳಿಸಿಕೊಳ್ಳುವುದು ಸವಾಲಿನ ಕೆಲಸ. ಕೆಲವೆಡೆ ಖಾಸಗಿ ಕಟ್ಟಡಗಳಲ್ಲಿ ತರಗತಿ ನಡೆಸಲಾ ಗುತ್ತಿದೆ. ಕಾಂಪೌಂಡ್, ರಸ್ತೆ, ಕುಡಿಯುವ ನೀರು, ಶೌಚಾಲಯ, ಸಿಬ್ಬಂದಿ ಕೊರತೆಯಿಂದ ಅಂಗನವಾಡಿಗಳು ಬಳಲುತ್ತಿದ್ದು ಸರ್ಕಾರ ಆ ಕಡೆಗೂ ಗಮನ ಹರಿಸಬೇಕಿದೆ ಎಂಬ ಆಗ್ರಹ ಕೇಳಿಬಂದಿದೆ.

> ಜಿಲ್ಲೆಯ 100 ಅಂಗನವಾಡಿ ಕೇಂದ್ರಗಳಲ್ಲಿ ಇಂಗ್ಲಿಷ್ ಮಿಡಿಯಂ ಪ್ರಾರಂಭಿಸಲು ಸಿದ್ಧತೆ ಮಾಡಿಕೊಂಡಿದ್ದು ಶಿಕ್ಷಕಿಯರಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಮೂರು ಪಠ್ಯ ಪುಸ್ತಕ ಹಾಗು ಸ್ಮಾರ್ಟ್ ಟಿವಿಗಳನ್ನು ಅಂಗನವಾಡಿಗಳಿಗೆ ಒದಗಿಸಲಾಗಿದೆ. ನ.28 ರಂದು ರಾಜ್ಯಾದ್ಯಂತ ಯೋಜನೆಗೆ ಚಾಲನೆ ಸಿಗಲಿದೆ. -ಎಂ.ಆರ್.ಧರಣಿಕುಮಾರ್,
> ಉಪನಿರ್ದೇಶಕರು, ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆ ಹಾಸನ

**ಇಂಗ್ಲಿಷ್ ಮಿಡಿಯಂಗೆ ಆಯ್ಕೆಯಾದ ಅಂಗನವಾಡಿಗಳ ವಿವರ**

| ತಾಲ್ಲೂಕು | ಕೇಂದ್ರಗಳ ಸಂಖ್ಯೆ |
|---|---|
| ಹಾಸನ | 10 |
| ಚನ್ನರಾಯಪಟ್ಟಣ | 06 |
| ಹೊಳೆನರಸೀಪುರ | 15 |
| ಬೇಲೂರು | 12 |
| ಸಕಲೇಶಪುರ | 04 |
| ಆಲೂರು | 04 |
| ಅರಸೀಕೆರೆ | 22 |
| ಅರಕಲಗೂಡು | 27 |
| ಒಟ್ಟು | 100 |

100 ಅಂಗನವಾಡಿ ಕೇಂದ್ರಗಳಲ್ಲಿಎಲ್‌ಕೆಜಿ ಹಾಗುಯುಕೆಜಿ ಆರಂಭಿಸಲು ಕ್ರಮ ವಹಿಸಲಾಗಿದೆ.


» ನಾಲ್ಕನೇ ಪುಟದಲ್ಲಿ

# ಹಿರಿಯ ನಾಗರಿಕರಿಗೆ ಗೌರವ ನೀಡಬೇಕು

• ಪ್ರಜೋದಯ ವರದಿ

**ಹಾಸನ:** ಹುಟ್ಟಿದ ಮನುಷ್ಯ ಸಾಯಲೇಬೇಕು. ಆದರೆ ಬದುಕಿದ್ದ ಸಂದರ್ಭದಲ್ಲಿ ಹಿರಿಯ ನಾಗರಿಕರಿಗೆ ಎಷ್ಟು ಬೆಲೆ, ಗೌರವ ಕೊಡುತ್ತೇವೆ ಎನ್ನುವುದು ಬಹು ಮುಖ್ಯ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ ಅವರು ತಿಳಿಸಿದ್ದಾರೆ.

ಸಾಮಾಜಿಕ ನ್ಯಾಯಾ ಮತ್ತು ಸಬಲೀಕರಣ ಮಂತ್ರಾಲಯ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಜ್ಯ, ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ, ಹಿರಿಯ ನಾಗರೀಕರ ಸ್ವಯಂ ಸೇವಾ ಸಂಸ್ಥೆಗಳು ಇವರ ಸಹಯೋಗದಲ್ಲಿ ಸೋಮವಾರ ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಅಟಲ್ ಅಭ್ಯುದಯ ಯೋಜನೆ ಕುರಿತು ಅಧಿಕಾರಿಗಳಿಗೆ ಆಯೋಜಿಸಿದ್ದ ಒಂದು ದಿನದ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು, ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತ್ವರಿತವಾಗಿ ತಲುಪಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಹೆತ್ತು, ಹೊತ್ತು ಸಾಕಿ ಸಲುಹಿಸಿ ಜೀವನ ಕೊಟ್ಟು ಸಮಾಜಕ್ಕೆ ಉತ್ತಮ ಪ್ರಜೆಯನ್ನಾಗಿ ಮಾಡಿದ ತಂದೆ ತಾಯಿಗಳನ್ನು ಮಕ್ಕಳು ವೃದ್ಧಾಪ್ಯದಲ್ಲಿ ಸರಿಯಾಗಿ ನೋಡಿಕೊಳ್ಳದೆ ಅವರನ್ನು ವೃದ್ಧಾಶ್ರಮಗಳಿಗೆ ಹಾಕುತ್ತಿದ್ದಾರೆ. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಸಾರ್ವಜನಿಕರಿಗೆ ಸ್ಪಂದಿಸಿ ಸಾಮಾಜಿಕ ಕಳಕಳಿಯಿಂದ ಚಿಂತಿಸಿ ಕರ್ತವ್ಯ ನಿರ್ವಹಿಸುವ ಮೂಲಕ ಹಿರಿಯ ನಾಗರೀಕರಿಗೆ ಸರ್ಕಾರದ ಸವಲತ್ತುಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ನಿಗಾವಹಿಸಬೇಕು. ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆ ಕಾಯ್ದೆ 2007 ರ ಬಗ್ಗೆ ಗಮನಹರಿಸಿ ತುಳಿತಕ್ಕೆ ಒಳಗಾದವರಿಗೆ ಶೀಘ್ರವಾಗಿ ಪರಿಹಾರ ದೊರಕಿಸಲು ಮುಂದಾಗಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಲತಾಕುಮಾರಿ ಅವರು



ಮಾತನಾಡಿ, ದೇಶದ ಸಾಮಾಜಿಕ ವ್ಯವಸ್ಥೆಯನ್ನು ಸದೃಡಗೊಳಿಸಲು ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆ ಕಾಯ್ದೆಯನ್ನು ಜಾರಿಗೊಳಿಸಲಾಗಿದೆ. ಆದರೆ ಆ ಕಾಯ್ದೆ ಪ್ರಯೋಜನವನ್ನು ಎಷ್ಟು ಜನರು ಪಡೆಯುತ್ತಿದ್ದಾರೆ. ಈ ಕಾಯ್ದೆ ಬಗ್ಗೆ ಅಧಿಕಾರಿಗಳಿಗೆ ಎಷ್ಟು ಗೊತ್ತಿದೆ ಎನ್ನುವುದು ಒಂದು ಪ್ರಶ್ನೆಯಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚಿನ ಗಮನಹರಿಸಿ ಹಿರಿಯ ನಾಗರೀಕರ ಹಕ್ಕುಗಳ ಸಂರಕ್ಷಣೆಗೆ ಒತ್ತು ನೀಡಿ, ಒಂದು ತಂಡವಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು.

ಹಿರಿಯ ನಾಗರೀಕರ ಕಷ್ಟಗಳನ್ನು ಅರ್ಥ ಮಾಡಿಕೊಳ್ಳುವ ತಾಳ್ಮೆಯಿರಬೇಕು. ನಿಮಗೆ ಅನೇಕ ದೂರುಗಳು ಬರುತ್ತವೆ ಅವುಗಳಿಗೆ ಕಾನೂನಾತ್ಮಕವಾಗಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಅಧಿಕಾರಿಗಳು ಈ ಕಾಯ್ದೆ ಬಗ್ಗೆ ತಿಳಿದುಕೊಳ್ಳುವ ಅಗತ್ಯವಿದೆ. ಅನುಷ್ಠಾನ ಮಾಡುವಾಗ ಬರುವ ಸವಾಲುಗಳನ್ನು ಹೇಗೆ ನಿರ್ವಹಿಸಬೇಕು ಎಂಬುದರ ಕುರಿತು ಚರ್ಚೆ ಜೊತೆಗೆ ವಿಶ್ಲೇಷಣೆ ಮಾಡಿ ಮುಂದುವರೆಯಬೇಕು ಎಂದರು.

ವೃದ್ಧಾಪ್ಯ ಜೀವನದಲ್ಲಿ ಒಂದು ಹಂತ ಮುಂದೆ ನಾವು -ನೀವೆಲ್ಲಾ ಆ ಹಂತವನ್ನು ತಲುಪಲೇಬೇಕು. ಹಾಗಾಗಿ ಹಿರಿಯರ ಆರೋಗ್ಯ ಹಾಗೂ ಕಾನೂನಾತ್ಮಕ ಸಮಸ್ಯೆಗಳನ್ನು ಬಗೆಹರಿಸಲು ಈ ಕಾಯ್ದೆ ಹಿರಿಯರಿಗೆ ಸಂಜೀವಿನಿಯಾಗಿದೆ. ಸಮಾಜದ ಸ್ವಾಸ್ಥೆ ಕಾಪಾಡಲು ಈ ಕಾಯ್ದೆ ಅನಿವಾರ್ಯ ಎಂದು ಅಭಿಪ್ರಾಯಪಟ್ಟರು.

ಯಾವುದೇ ದೇಶದ ಪ್ರಗತಿಯಲ್ಲಿ ದುರ್ಬಲ ವರ್ಗದವರನ್ನು ಜೊತೆಯಾಗಿ ಸೇರಿಸಿಕೊಂಡು ಸಮಾಜ ಮುಖಿಯಾಗಿ ಮುಂದುವರೆಯುವ ಮೂಲಕ ಅಭಿವೃದ್ಧಿ ಕಾಣಬೇಕು ಎಂದರಲ್ಲದೆ, ಹಿರಿಯರು ಸಮಾಜದ ಅವಿಭಾಜ್ಯ ಅಂಗ ಅವರ ಹಿತ ಕಾಯುವುದು ಪ್ರತಿಯೊಬ್ಬರ ಕರ್ತವ್ಯ ಎಂದು ತಿಳಿಸಿದರು.

5 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರವಿಕುಮಾರ್ ಮಾತನಾಡಿ, ನಿರ್ವಹಣಾ ನ್ಯಾಯ ಮಂಡಳಿಯ ಪ್ರಕ್ರಿಯೆ, ಅಧಿಕಾರಿಗಳು ವಿಳಂಬ ಮತ್ತು ಸವಾಲುಗಳು ತ್ವರಿತ ಮತ್ತು ನ್ಯಾಯಯುತ ಪರಿಹಾರಗಳ ಕುರಿತು ಉಪನ್ಯಾಸ ನೀಡಿ ಮಾತನಾಡುತ್ತ ಪ್ರತಿಯೊಬ್ಬರಿಗೂ ಸ್ವತಂತ್ರಯುತವಾಗಿ ನಿರ್ಭಿತಿಯಿಂದ ಜೀವನ ನಡೆಸುವ ಅವಕಾಶವಿದೆ. ಹಿರಿಯ ನಾಗರೀಕರ ಸಂರಕ್ಷಣೆಗಾಗಿ 2007 ರಲ್ಲಿ ಕಾಯ್ದೆ ಜಾರಿಗೆ ತರಲಾಗಿದೆ. ತಂದೆ -ತಾಯಿ ಜೀವನ ನಡೆಸಲು ಯಾವುದೇ ವರಮಾನ ಇಲ್ಲದಿದ್ದ ಸಂದರ್ಭದಲ್ಲಿ ಮಕ್ಕಳಿಂದ ಜೀವನಾಂಶ ಪಡೆಯಲು ಅವಕಾಶವಿದೆ ಎಂದರು.

ನಿಗದಿತ ಕಾಲಾವಧಿಯಲ್ಲಿ ಪ್ರಕರಣಗಳು ಇತ್ಯರ್ಥಗೊಳ್ಳದೆ ಸಮಯ ಹಿಡಿಯುವುದರಿಂದ ಅವರ ಜೀವನ ನಡೆಸಲು ಅನುಕೂಲವಾಗುವಂತೆ ಮಧ್ಯಂತರ ಜೀವನಾಂಶಕ್ಕೆ ಆದೇಶ ಮಾಡಬೇಕು ಎಂದರಲ್ಲದೆ, 30 ದಿನದೊಳಗೆ ಹಣವನ್ನು ಠೇವಣಿ ಇಡಬೇಕು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ.ಆರ್.ಅನುಪಮ ಉಪಸ್ಥಿತರಿದ್ದರು.

## ಸಮನ್ವಯದ ಕೊರತೆಯೇ ಸಮಸ್ಯೆಗಳ ಮೂಲ

### ತಾಲ್ಲೂಕಿನಲ್ಲಿ ಸ್ನೇಹಮಯಿ ವಾತಾವರಣ



• ಪ್ರಜೋದಯ ವರದಿ

**ಸಕಲೇಶಪುರ:** ಸಮನ್ವಯದ ಕೊರತೆಯೇ ಸಮಸ್ಯೆಗಳ ಮೂಲ ಎಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ಸೋಮವಾರ ತಾಲ್ಲೂಕು ನೌಕರರ ಸಂಘದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿ, ಸಂಘದ ಕಚೇರಿಯ ಕಾಮಗಾರಿಗೆ ಇರುವ ಅಡ್ಡಿಗಳಿಗೆ ಇಲಾಖೆಗಳ ಮದ್ಯೆ ಇರುವ ಸಮನ್ವಯದ ಕೊರತೆ ಕಾರಣವಾಗಿದೆ. ಪರಸ್ಪರ ಹೊಂದಾಣಿಕೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳುವತ್ತ ಅಧಿಕಾರಿಗಳು ಗಮನಹರಿಸ ಬೇಕು. ಕಟ್ಟಡ ಕಾಮಗಾರಿಗೆ ಶಾಸಕರ ನಿಧಿಯಿಂದ ಐದು ಲಕ್ಷ ರೂ.ಗಳನ್ನು ನೀಡುವುದಾಗಿ ತಿಳಿಸಿದರು.

ಅಧಿಕಾರಿಗಳಿಗೆ ತಾಲ್ಲೂಕಿನಲ್ಲಿ ಕೆಲಸ ಮಾಡಲು ಸ್ನೇಹಮಯಿ ವಾತಾವರಣ ಸೃಷ್ಟಿಸಲಾಗಿದೆ ಎಂದು ಅವರು ಹೇಳಿದರು.

ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ತಮ್ಮಣ್ಣಶೆಟ್ಟಿ, ಕಾರ್ಯದರ್ಶಿ ಜಗದೀಶ್, ಗೌರವ ಅಧ್ಯಕ್ಷೆ ಶಾಂತ, ಸಲೀ, ಶಶಿ, ಪ್ರವೀಣ್‌ಕುಮಾರ್, ಕೆಂಚಯ್ಯ ಮುಂತಾದವರಿದ್ದರು.

## ಶೇಖ್ ಹಸೀನಾ ಹಸ್ತಾಂತರಕ್ಕೆ ಬಾಂಗ್ಲಾ ಪತ್ರ

### ಸಾಮೂಹಿಕ ಮಾರಣ ಹೋಮದ ಆರೋಪ ಮರಣದಂಡನೆ ವಿಧಿಸಿರುವ ಐ.ಸಿ.ಟಿ.

• ಪ್ರಜೋದಯ ವರದಿ

**ಢಾಕಾ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರನ್ನು ಹಸ್ತಾಂತರಿಸುವಂತೆ ಕೋರಿ ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ಭಾರತಕ್ಕೆ ಅಧಿಕೃತ ಪತ್ರ ಬರೆದಿದೆ.





2024ರಲ್ಲಿ ಬಾಂಗ್ಲಾದೇಶದಲ್ಲಿ ನಡೆದ ದಂಗೆಯ ಸಂದರ್ಭದಲ್ಲಿ ಸಾಮೂಹಿಕ ಮಾರಣ ಹೋಮದ ಅಪರಾಧಕ್ಕಾಗಿ ಆಗಿನ ಪ್ರಧಾನಿ ಹಸೀನಾ ಅವರಿಗೆ ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧ ನ್ಯಾಯ ಮಂಡಳಿಯು (ಐಸಿಟಿ) ಮರಣ ದಂಡನೆ ವಿಧಿಸಿದೆ.

ಕಳೆದ ವರ್ಷದ ಆ. 5ರಂದು ಸರ್ಕಾರ ಪತನವಾದ ನಂತರ ದೇಶ ತೊರೆದಿರುವ ಹಸೀನಾ ಅವರು ಭಾರತದಲ್ಲಿ ಆಶ್ರಯ ಪಡೆದಿದ್ದಾರೆ. ಹಸೀನಾ ಅವರ ಹಸ್ತಾಂತರ ಕೋರಿ ನವದೆಹಲಿಯಲ್ಲಿರುವ ಬಾಂಗ್ಲಾದೇಶ ಹೈಕಮಿಷನ್ ಮೂಲಕ ಅಧಿಕೃತ ರಾಜತಾಂತ್ರಿಕ ಪತ್ರ ಕಳುಹಿಸಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಲಹೆಗಾರ ಮೊಹಮ್ಮದ್ ತೌಹೀದ್ ಹೊಸೇನ್ ಹೇಳಿದ್ದಾರೆ.

## ಸುಪ್ರೀಂನ ನೂತನ ಸಿಜೆಐ ನ್ಯಾ. ಸೂರ್ಯಕಾಂತ್ ಪ್ರಮಾಣ ವಚನ ಸ್ವೀಕಾರ

• ಪ್ರಜೋದಯ ವರದಿ

**ನವದೆಹಲಿ:** ದೇಶದ 53ನೇ ಮುಖ್ಯ ನ್ಯಾಯಮೂರ್ತಿಗಳಾಗಿ ಸೂರ್ಯಕಾಂತ್ ಅವರು ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು.

ನ್ಯಾ.ಬಿ.ಆರ್.ಗವಾಯಿ ಅವರ ನಂತರ ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಗಳಾಗಿ ಅಧಿಕಾರ ವಹಿಸಿಕೊಂಡ ಸೂರ್ಯಕಾಂತ್‌ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಮಾಣ ವಚನ ಬೋಧಿಸಿದರು. ನ್ಯಾಯಮೂರ್ತಿ ಸೂರ್ಯ ಕಾಂತ್ ಸುಮಾರು 15 ತಿಂಗಳ ಕಾಲ ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಲಿದ್ದಾರೆ ಮತ್ತು 65 ವರ್ಷ ತುಂಬಿದ ನಂತರ ಫೆಬ್ರವರಿ 9, 2027 ರಂದು ಅಧಿಕಾರ ತ್ಯಜಿಸಲಿದ್ದಾರೆ.

ಫೆಬ್ರವರಿ 10, 1962 ರಂದು ಹರಿಯಾಣದ ಹಿಸಾರ್‌ನಲ್ಲಿ ಮಧ್ಯಮ ವರ್ಗದ ಕುಟುಂಬದಲ್ಲಿ ಸೂರ್ಯಕಾಂತ್ ಜನಿಸಿದರು. ಅವರು 1981 ರಲ್ಲಿ ಹಿಸಾರ್‌ನ ಸರ್ಕಾರಿ ಸ್ನಾತಕೋತ್ತರ ಕಾಲೇಜಿನಿಂದ ಪದವಿ ಪಡೆದರು. ಅವರು 1984 ರಲ್ಲಿ ರೋಹ್ಟಕ್‌ನ ಮಹರ್ಷಿ ದಯಾನಂದ ವಿಶ್ವವಿದ್ಯಾಲಯದಿಂದ ಕಾನೂನು ಪದವಿ ಪಡೆದರು.

ನ್ಯಾಯಮೂರ್ತಿ ಸೂರ್ಯಕಾಂತ್ 1984 ರಲ್ಲಿ ಹಿಸಾರ್‌ನ ಜಿಲ್ಲಾ ನ್ಯಾಯಾಲಯದಲ್ಲಿ ಕಾನೂನು ಅಭ್ಯಾಸ ಮಾಡಲು ಪ್ರಾರಂಭಿಸಿದರು. ನಂತರ ಅವರು 1985 ರಲ್ಲಿ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನಲ್ಲಿ ಅಭ್ಯಾಸ ಮಾಡಲು ಚಂಡೀಗಢಕ್ಕೆ ಸ್ಥಳಾಂತರಗೊಂಡರು. ನಂತರ 2000 ರಲ್ಲಿ ಹರಿಯಾಣದ ಅತ್ಯಂತ ಕಿರಿಯ ಅಡ್ವೋಕೇಟ್ ಜನರಲ್ ಆದರು.



2011 ರಲ್ಲಿ ಕುರುಕ್ಷೇತ್ರ ವಿಶ್ವವಿದ್ಯಾಲಯದಿಂದ ಕಾನೂನು ಸ್ನಾತಕೋತ್ತರ ಪದವಿಯಲ್ಲಿ ಪ್ರಥಮ ದರ್ಜೆ ಪಡೆದ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ನಂತರ ನ್ಯಾಯಮೂರ್ತಿ ಕಾಂತ್ ಅವರನ್ನು 2018 ರಲ್ಲಿ ಹಿಮಾಚಲ ಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿಯಾಗಿ ನೇಮಿಸಲಾಯಿತು. 2019 ರಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ ಬಡ್ತಿ ಪಡೆದ ಅವರು, ರಾಜ್ಯ ವಿಧಾನಸಭೆಯು ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸುವಲ್ಲಿ ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳ ಅಧಿಕಾರಗಳ ಕುರಿತು ಇತ್ತೀಚಿನ ಅಧ್ಯಕ್ಷೀಯ ಉಲ್ಲೇಖ ಸೇರಿದಂತೆ ಪ್ರಮುಖ ತೀರ್ಪುಗಳ ಭಾಗವಾಗಿದ್ದಾರೆ. ವಸಾಹತುಶಾಹಿ ಯುಗದ ದೇಶದ್ರೋಹ ಕಾನೂನನ್ನು ಸ್ಥಗಿತಗೊಳಿಸಿದ ಪೀಠದ ಭಾಗವೂ ಆಗಿದ್ದರು, ಸರ್ಕಾರದ ಪರಿಶೀಲನೆಯವರೆಗೆ ಅದರ ಅಡಿಯಲ್ಲಿ ಯಾವುದೇ ಹೊಸ ಪ್ರಕರಣಗಳನ್ನು ದಾಖಲಿಸಬಾರದು ಎಂದು ನಿರ್ದೇಶಿಸಿದರು.

ಇತ್ತೀಚೆಗೆ ವಿಧಾನಸಭಾ ಚುನಾವಣೆಗಳು ನಡೆದ ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕೈಗೊಳ್ಳುವ ಚುನಾವಣಾ ಸಮಿತಿಯ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಗುಂಪನ್ನು ಆಲಿಸುವಾಗ, ಬಿಹಾರದಲ್ಲಿ ಕರಡು ಮತದಾರರ ಪಟ್ಟಿಯಿಂದ ಹೊರಗಿಡಲಾದ 65 ಲಕ್ಷ ಮತದಾರರ ವಿವರಗಳನ್ನು ಬಹಿರಂಗಪಡಿಸುವಂತೆ ನ್ಯಾ. ಕಾಂತ್ ಚುನಾವಣಾ ಆಯೋಗವನ್ನು ಒತ್ತಾಯಿಸಿದ್ದರು.

ಕಾನೂನುಬಾಹಿರವಾಗಿ ಅಧಿಕಾರದಿಂದ ತೆಗೆದು ಹಾಕಲ್ಪಟ್ಟ ಮಹಿಳಾ ಸರ್ಪಂಚ್ (ಗ್ರಾಮ ಮುಖ್ಯಸ್ಥೆ) ಅವರನ್ನು ಮರುಸ್ಥಾಪಿಸಿದ ಪೀಠದ ನೇತೃತ್ವವನ್ನೂ ಅವರು ವಹಿಸಿಕೊಂಡಿದ್ದರು. ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ ಸೇರಿದಂತೆ ಬಾರ್ ಅಸೋಸಿಯೇಷನ್‌ಗಳಲ್ಲಿ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಬೇಕೆಂದು ನಿರ್ದೇಶಿಸಿದ ಕೀರ್ತಿಯೂ ಅವರಿಗೆ ಸಲ್ಲುತ್ತದೆ.

ರಕ್ಷಣಾ ಪಡೆಗಳಿಗೆ ಒನ್ ರ್ಯಾಂಕ್ -ಒನ್ ಪೆನ್ಷನ್ ಯೋಜನೆಯನ್ನು ಅವರು ಎತ್ತಿ ಹಿಡಿದಿದ್ದಾರೆ. ಇದು ಸಾಂವಿಧಾನಿಕವಾಗಿ ಮಾನ್ಯವಾಗಿದೆ ಎಂದು ಕರೆದರು ಮತ್ತು ಶಾಶ್ವತ ಆಯೋಗದಲ್ಲಿ ಸಮಾನತೆಯನ್ನು ಕೋರಿ ಸಶಸ್ತ್ರ ಪಡೆಗಳಲ್ಲಿನ ಮಹಿಳಾ ಅಧಿಕಾರಿಗಳ ಅರ್ಜಿಗಳನ್ನು ಅವರು ಆಲಿಸುತ್ತಿದ್ದಾರೆ.

## ಪ್ರಕೃತಿ ಚಿಕಿತ್ಸಾ ದಿನಾಚರಣೆ: ಜಾಗೃತಿ ಅಭಿಯಾನ

• ಪ್ರಜೋದಯ ವರದಿ

**ಹಾಸನ:** 8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಅಂಗವಾಗಿ ಉಜಿರೆಯ ಎಸ್‌ಡಿಎಂ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನಗಳ ಮಹಾವಿದ್ಯಾಲಯ ಕಾಲೇಜಿನ ವೈದ್ಯ ವಿದ್ಯಾರ್ಥಿಗಳು ಜಿಲ್ಲೆಯಾದ್ಯಂತ ಯಶಸ್ವಿ ಜಾಗೃತಿ ಕಾರ್ಯಕ್ರಮ ಆಯೋಜಿಸಿದ್ದರು.

8ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆಯ ಅಂಗವಾಗಿ, ಉಜಿರೆಯ ಎಸ್‌ಡಿಎಂ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನಗಳ ಮಹಾವಿದ್ಯಾಲಯ ಕಾಲೇಜಿನ ವಿದ್ಯಾರ್ಥಿಗಳಾದ ಅಮೃತ ಜಿ.ಎಲ್. (4ನೇ ವರ್ಷ), ಅಕ್ಷಯ್ (1ನೇ ವರ್ಷ) ಮತ್ತು ವರ್ಷಿಣಿ (1ನೇ ವರ್ಷ) ಇವರು ಕಾಲೇಜಿನ ಪ್ರಾಂಶುಪಾಲ ಡಾ.



ಪ್ರಶಾಂತ್ ಶೆಟ್ಟಿ ಅವರ ನೇತೃತ್ವದಲ್ಲಿ ಹಾಗೂ ಉಜಿರೆಯ ಶಾಂತಿವನ ಪ್ರಕೃತಿ ಚಿಕಿತ್ಸಾಲಯದ ವೈದ್ಯ ಅಧಿಕಾರಿಗಳಾದ ಡಾ. ಅಶ್ವಿನ್ ಅವರ ಸಹಾಯದೊಂದಿಗೆ ನವೆಂಬರ್ 10 ರಿಂದ ನವೆಂಬರ್ 18ರವರೆಗೆ ಹಾಸನ ಜಿಲ್ಲೆಯಾದ್ಯಂತ ಪ್ರಕೃತಿ ಚಿಕಿತ್ಸೆಯ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಪ್ರಕೃತಿ ಚಿಕಿತ್ಸೆಯ ಅರಿವು ಮತ್ತು ಯೋಗದ ಮಹತ್ವವನ್ನು ತಿಳಿಸಲಾಯಿತು. ನಿತ್ಯ ಜೀವನ ಶೈಲಿ ಹಾಗೂ ಆಹಾರ ಪದ್ಧತಿಯ ಬಗ್ಗೆ ಜನರಲ್ಲಿ ಅರಿವು ಮೂಡಿಸಲಾಯಿತು. ಇತ್ತೀಚೆಗೆ ಸಾಮಾನ್ಯವಾಗುತ್ತಿರುವ ರಕ್ತದೊತ್ತಡ, ಮಧುಮೇಹ, ಸ್ಥೂಲಕಾಯ, ಸಂಧಿವಾತ, ನರಗಳ ದೌರ್ಬಲ್ಯ ಮುಂತಾದ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸಿ, ಪ್ರಕೃತಿ ಚಿಕಿತ್ಸೆಯನ್ನು ನೀಡಲಾಯಿತು.

ಅಭಿಯಾನದ ಕೊನೆಯಲ್ಲಿ ಅರಸೀಕೆರೆಯ ತಾಲ್ಲೂಕು ಕಚೇರಿಯಲ್ಲಿ ವೈದ್ಯಕೀಯ ತಪಾಸಣಾ ಶಿಬಿರವನ್ನು ನಡೆಸಲಾಯಿತು. ಈ ಶಿಬಿರಕ್ಕೆ ಅರಸೀಕೆರೆ ತಹಶೀಲ್ದಾರ್ ಎಂ.ಜಿ. ಸಂತೋಷ್‌ಕುಮಾರ್ ಮತ್ತು ಕಾಲೇಜಿನ ಎಂ.ಡಿ. ಪದವೀಧರರಾದ ಡಾ. ಶಶಾಂಕ್ ಹಾಗೂ ಡಾ. ರಕ್ಷಿತ ನೆರವು ನೀಡಿದರು.

## ಬಾಲಿವುಡ್ ಹಿರಿಯ ನಟ ಧರ್ಮೇಂದ್ರ ಇನ್ನಿಲ್ಲ

• ಪ್ರಜೋದಯ ವರದಿ

**ಮುಂಬೈ:** ಕಳೆದ ಹಲವು ದಿನಗಳಿಂದ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದ ಬಾಲಿವುಡ್‌ನ ಹೀ ಮ್ಯಾನ್, ಎವರ್‌ಗ್ರೀನ್ ಸ್ಟಾರ್, ಆಕ್ಷನ್ ಕಿಂಗ್ ಎಂದು ಜನಪ್ರಿಯರಾಗಿದ್ದ ಹಿರಿಯ ನಟ ಧರ್ಮೇಂದ್ರ (89) ಅವರು ಸೋಮವಾರ ಮುಂಬೈನ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು.

ಧರ್ಮೇಂದ್ರ ಅವರು ತೀವ್ರ ಉಸಿರಾಟ ಸಮಸ್ಯೆಯಿಂದ ಬಳಲುತ್ತಿದ್ದರು. ಸೋಮವಾರ ಬೆಳಿಗ್ಗೆ ಅವರ ಆರೋಗ್ಯದಲ್ಲಿ ಏರುಪೇರು ಉಂಟಾಗಿತ್ತು. ಮುಂಬೈನ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅವರನ್ನು ಉಳಿಸಿಕೊಳ್ಳುವ ವೈದ್ಯರ ಪ್ರಯತ್ನ ಫಲಕೊಡಲಿಲ್ಲ.

ರಾಷ್ಟ್ರಪತಿ ದ್ರೌಪತಿ ಮುರ್ಮು, ಉಪ ರಾಷ್ಟ್ರಪತಿ ರಾಧಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವಾರು ಗಣ್ಯರು ಸಂತಾಪ ಸೂಚಿಸಿದ್ದಾರೆ. ಡಿ. 8ರಂದು 90ನೇ ವಸಂತಕ್ಕೆ ಕಾಲಿಡಲಿರುವ ನಟ ಧರ್ಮೇಂದ್ರ ಅವರನ್ನು ಕಳೆದ ವಾರವಷ್ಟೇ ಉಸಿರಾಟದ ತೊಂದರೆಯಿಂದಾಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅದಲ್ಲದೇ ಏಪ್ರಿಲ್‌ನಲ್ಲಿ ಅವರು ಕಣ್ಣಿನ ಶಸ್ತ್ರಚಿಕಿತ್ಸೆಗೂ ಒಳಗಾಗಿದ್ದರು.

ಆರು ದಶಕಗಳ ವೃತ್ತಿಜೀವನದಲ್ಲಿ ಧರ್ಮೇಂದ್ರ ಅವರು ಹಿಂದಿ ಚಿತ್ರರಂಗದಲ್ಲಿ ತಮ್ಮ ಛಾಪನ್ನು ಮೂಡಿಸಿದ್ದಾರೆ. ಅವರ ಮನೋಹರಕ ಅಭಿನಯದಿಂದಾಗಿ ಬೇಗನೆ ಜನಪ್ರಿಯತೆಯನ್ನು ಪಡೆದರು.

1960ರಲ್ಲಿ ದಿಲ್ ಭೀ ತೇರಾ ಹಮ್ ಭೀ ತೇರೆ ಮೂಲಕ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದರು. ಅಲ್ಲಿಂದ ಪ್ರಾರಂಭವಾಗಿ ಬಂದಿನಿ,



ಅನುಪಮಾ, ಶೋಲೆ, ಚುಪ್ಕೆ ಚುಪ್ಕೆ, ಮೇರಾ ಗಾಂವ್ ಮೇರಾ ದೇಶ್ ಮತ್ತು ಡ್ರೀಮ್ ಗರ್ಲ್ ಸೇರಿದಂತೆ ಹಲವು ಅತ್ಯುತ್ತಮ ಸಿನಿಮಾಗಳಲ್ಲಿ ನಟಿಸಿದ್ದಾರೆ.

2025ರ ಆರಂಭದಲ್ಲಿ ಧರ್ಮೇಂದ್ರ ಅವರು ಶಾಹಿದ್ ಕಪೂರ್ ಮತ್ತು ಕೃತಿ ಸನೋನ್ ನಟನೆಯ ತೇರಿ ಬಾತೋ ಮೇ ಐಸಾ ಉಲ್ಜಾ ಜಿಯಾ ಸಿನಿಮಾದಲ್ಲಿ ಕೊನೆಯ ಬಾರಿ ಕಾಣಿಸಿಕೊಂಡಿದ್ದರು. ಇನ್ನೂ ಡಿ. 25ರಂದು ತೆರೆಕಾಣಲಿರುವ ಇಕ್ಕಿಸ್ ಸಿನಿಮಾದಲ್ಲಿ ಕಾಣಿಸಿಕೊಳ್ಳಬೇಕಿತ್ತು. ಬಾಲಿವುಡ್‌ನ ಮೂಲ ಹೀ-ಮ್ಯಾನ್ ಖ್ಯಾತಿಯ ಧರ್ಮೇಂದ್ರ, ತಮ್ಮ ಮನಮೋಹಕ ನಟನೆ, ಆಕರ್ಷಕ ರೂಪ ಮತ್ತು ಯಶಸ್ವಿ ಚಿತ್ರಗಳ ಮೂಲಕ ಪ್ರೇಕ್ಷಕರ ಮನ ಗೆದ್ದಿದ್ದರು.

ಪಂಜಾಬ್‌ನ ಸಾಮಾನ್ಯ ಹಿನ್ನೆಲೆಯಿಂದ ಬಂದು, ಭಾರತೀಯ ಚಿತ್ರರಂಗದ ದಿಗ್ಗಜರಾಗಿ ಬೆಳೆದ ಧರ್ಮೇಂದ್ರ ಅವರ ಜೀವನವು ಉತ್ಸಾಹ, ಕುಟುಂಬ ಮತ್ತು ಸಿನಿಮಾದಿಂದ ತುಂಬಿತ್ತು. 1935ರಲ್ಲಿ ಜನಿಸಿದ ಧರ್ಮೇಂದ್ರ ದೇವಲ್ ಅವರು 1950ರ ದಶಕದ ಕೊನೆಯಲ್ಲಿ ತಮ್ಮ ನಟನಾ ವೃತ್ತಿಜೀವನವನ್ನು ಪ್ರಾರಂಭಿಸಿ, ಶೀಘ್ರದಲ್ಲೇ ಭಾರತೀಯ ಚಿತ್ರರಂಗದ ಅಗ್ರ ತಾರೆಯಾಗಿ ಮೆರೆದದ್ದು ಮಾತ್ರ ಸುಳ್ಳಲ್ಲ.

## ಬೀದಿ ನಾಯಿಗಳ ಬಗ್ಗೆ ಮಾಹಿತಿಗೆ ಸೂಚನೆ

• ಪ್ರಜೋದಯ ವರದಿ

**ಹಾಸನ:** ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೈಲ್ವೆ ನಿಲ್ದಾಣಗಳ ಮುಖ್ಯಸ್ಥರು ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿಯಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅದರ ಸಂಖ್ಯೆಯನ್ನು ಲೆಕ್ಕ ಮಾಡಿ ಮುಖ್ಯಾಧಿಕಾರಿಗಳಿಗೆ ತಿಳಿಸಲು ಕೋರಲಾಗಿದೆ.

ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮವಹಿಸುವುದು. ನಗರ ಸ್ಥಳೀಯ ಸಂಸ್ಥೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಭಂದಿಸುವದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು.

ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನಃ ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶ ದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವುದು ಎಂದು ಆಲೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅವರು ತಿಳಿಸಿದ್ದಾರೆ.

## ವಿದ್ಯಾರ್ಥಿಗಳಿಗೆ ಶಿಸ್ತು, ಸಮಯಪಾಲನೆ ಬಹಳ ಮುಖ್ಯ

• ಪ್ರಜೋದಯ ವರದಿ

**ಹಾಸನ:** ನಗರದ ಬಿ. ಕಾಟೀಹಳ್ಳಿಯಲ್ಲಿರುವ ಸಂತ ಜೋಸೆಫರ ಕಾಲೇಜಿನಲ್ಲಿ 2025-26 ನೇ ಸಾಲಿನ ವಾರ್ಷಿಕ ಕ್ರೀಡಾಕೂಟ ಆಯೋಜಿಸಲಾಗಿತ್ತು.

ಅಂತರರಾಷ್ಟ್ರೀಯ ಪ್ಯಾರಾ ಒಲಿಂಪಿಕ್ ವಾಲಿಬಾಲ್ ಕ್ರೀಡಾಪಟು ಹಾಗೂ ಕಾಲೇಜಿನ ಹಳೆಯ ವಿದ್ಯಾರ್ಥಿ ಇನ್ಫಾಂಟ್ ನಿಶಾಂತ್ ಮತ್ತು ಅಂತಾರಾಷ್ಟ್ರೀಯ ಅಥ್ಲೆಟಿಕ್ ಕ್ರೀಡಾಪಟು ಬಾಲಕೃಷ್ಣ ಗಿಡಕ್ಕೆ ನೀರು ಎರೆಯುವುದರ ಮೂಲಕ ಚಾಲನೆ ನೀಡಿದರು.

ನಿಶಾಂತ್ ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಸ್ತು, ಸಮಯಪಾಲನೆ ಬಹಳ ಮುಖ್ಯ ಓದಿನ ಜೊತೆಗೆ ಕ್ರೀಡೆಗಳಲ್ಲಿ ಪಾಲ್ಗೊಂಡರೆ ಉತ್ತಮ ಭವಿಷ್ಯ ಇದೆ.



ಹಾಗಾಗಿ ಪಠ್ಯದ ಜೊತೆಗೆ ಕ್ರೀಡೆಗಳಲ್ಲಿ ಪಾಲ್ಗೊಳ್ಳಬೇಕು ಎಂದರು.

ಬಾಲಕೃಷ್ಣ ಅವರು ಮಾತನಾಡಿ, ಗುರಿ ಮುಟ್ಟಬೇಕಾದರೆ ಮನಸ್ಸಿನ ಏಕಾಗ್ರತೆ ಅತೀ ಮುಖ್ಯ. ಪ್ರತಿದಿನ ಕ್ರೀಡಾಭ್ಯಾಸ ಮಾಡಬೇಕು. ಛಲಬಿಡದ ಹೋರಾಟದ ಜೊತೆಗೆ ತಾಳ್ಮೆ ಅಗತ್ಯ. ಆಗ ಮಾತ್ರ ಗೆಲುವು ಸಾಧ್ಯ. ಸತತ ಪ್ರಯತ್ನವೇ ಸಾಧನೆಯ ರಹಸ್ಯವಾಗಿದೆ. ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನಮಾಡಬೇಕು ಎಂದು ತಿಳಿಸಿದರು.

ಪ್ರಾಂಶುಪಾಲರಾದ ಡಾ.ರೆ.ಫಾ. ಮ್ಯಾಕ್ಸಿಂ ಡಯಾಸ್ ಎಸ್.ಜೆ. ಮಾತನಾಡಿ, ವಿದ್ಯಾರ್ಥಿಗಳು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿ ಕ್ರೀಡಾ ಪ್ರಮಾಣ ವಚನ ಬೋಧಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಂಸ್ಥೆಯ ಮುಖ್ಯಸ್ಥ ರೆ.ಫಾದರ್ ಲಿಯೋಪೆರೇರಾ ಎಸ್.ಜೆ. ಅವರು ಮಾತನಾಡಿ, ಕ್ರೀಡೆಯು ಮಾನಸಿಕ ಮತ್ತು ದೈಹಿಕ ಬೆಳವಣಿಗೆ ಸಹಕಾರಿಯಾಗಿದೆ. ವಿದ್ಯಾರ್ಥಿಗಳು ಓದಿನ ಜೊತೆಗೆ ಇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದರೆ ಸವಾಲುಗಳನ್ನು ಸಮರ್ಥವಾಗಿ ಎದುರಿಸಬಹುದು ಎಂದರು.

ಕಾರ್ಯಕ್ರಮದ ಸಂಚಾಲಕ ಕೀರ್ತಿ.ಎನ.ಆರ್. ದೈಹಿಕ ಶಿಕ್ಷಣ ನಿರ್ದೇಶಕರು. ಉಪಪ್ರಾಂಶುಪಾಲ ಪ್ರದೀಪ್, ಕುಮಾರ್, ಕ್ಯಾಂಪಸ್ ಆನಿಮೇಟರ್ ರೆ.ಫಾ. ಓಲ್ವಿನ್ ವೇಗಸ್, ವಿತ್ತ ಅಧಿಕಾರಿ ರೆ.ಫಾ. ರಯಾನ್ ಪೆರೇರಾ, ಕ್ರೀಡಾ ಕಾರ್ಯದರ್ಶಿ ಸಾತ್ವಿಕ್ ಮತ್ತು ಕುಮಾರಿ ಪ್ರಾರ್ಥನಾ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಕಾಲೇಜಿನ 800 ವಿದ್ಯಾರ್ಥಿಗಳು (ಬಿ.ಕಾಂ, ಬಿ.ಬಿ.ಎ, ಬಿ.ಸಿ.ಎ) ಮತ್ತು ಸಂತ ಜೋಸೆಫರ ಎನ್.ಸಿ.ಸಿ ವಿದ್ಯಾಥಿಗಳು ಹಾಗೂ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಬ್ಯಾಂಡ್ ಸೆಟ್‌ನೊಂದಿಗೆ ಮಾರ್ಚ್ ಫಾಸ್ಟ್‌ನಲ್ಲಿ ಭಾಗವಹಿಸಿದ್ದರು.

ರಾಷ್ಟ್ರಗೀತೆ ಹಾಡುವುದರ ಮೂಲಕ ಧ್ವಜವಂದನೆ ಸಲ್ಲಿಸಲಾಯಿತು.

## ನ.27 ರಂದು ಪ್ರಗತಿ ಪರಿಶೀಲನಾ ಸಭೆ

• ಪ್ರಜೋದಯ ವರದಿ

**ಹಾಸನ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಹಾಸನ ಜಿಲ್ಲಾ ಪಂಚಾಯಿತಿಯ ಆಡಳಿತಾಧಿಕಾರಿಗಳು ಮತ್ತು ಹಾಸನ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ನವೀನ್ ರಾಜ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ 2025-26ನೇ ಸಾಲಿನ ಅಕ್ಟೋಬರ್-2025 ರ ಮಾಹೆಯ ಅಂತ್ಯದ ಪ್ರಗತಿ ಪರಿಶೀಲನಾ ಸಭೆಯನ್ನು ಹಾಸನ ಜಿಲ್ಲಾ ಪಂಚಾಯಿತಿಯ ಹೊಯ್ಸಳ ಸಭಾಂಗಣದಲ್ಲಿ ನ.27. ರಂದು ಬೆಳ್ಳಗ್ಗೆ 10 ಗಂಟೆಗೆ ನಿಗಧಿಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅವರು ತಿಳಿಸಿದ್ದಾರೆ.

### ಹರಿಹಳ್ಳಿಯಲ್ಲಿ ಕನ್ನಡ ರಾಜ್ಯೋತ್ಸವ ಸಮಾರೋಪದಲ್ಲಿ ಶಾಸಕ ಸಿಮೆಂಟ್ ಮಂಜುನಾಥ್

## ಕನ್ನಡ ಭಾಷೆಗೆ ಪ್ರಥಮ ಆದ್ಯತೆ ನೀಡಬೇಕು

• ಪ್ರಜೋದಯ ವರದಿ

**ಆಲೂರು:** ಕನ್ನಡ ಭಾಷೆಯನ್ನು ಅತ್ಯುತ್ತಮವಾಗಿ ತಿಳಿದು ಬಳಸಿ, ಬೆಳಗಿಸುವುದು ಎಲ್ಲರ ಕರ್ತವ್ಯ ಆಗಬೇಕು ಎಂದು ಶಾಸಕ ಸಿಮೆಂಟ್ ಮಂಜುನಾಥ್ ತಿಳಿಸಿದರು.

ತಾಲ್ಲೂಕಿನ ಕೆಂಚಮ್ಮನ ಹೊಸ ಕೋಟೆ ಹೋಬಳಿ ಹರಿಹಳ್ಳಿ ಮಂಗಳ ಕಲಾ ಸಾಹಿತ್ಯ ವೇದಿಕೆ ವತಿಯಿಂದ ಏರ್ಪಡಿಸಿದ್ದ ಕನ್ನಡ ರಾಜ್ಯೋತ್ಸವ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ವೇದಿಕೆಗಳಲ್ಲಿ ಮಾತ್ರ ಕನ್ನಡವನ್ನು ಹಾಡಿ ಹೊಗಳಿ, ನಂತರ ಅದನ್ನು ಮರೆಯುವ ಕೆಲಸ ಆಗಬಾರದು, ಮಾತೃಭಾಷೆ ಕನ್ನಡಕ್ಕೆ ಎಲ್ಲರೂ ಮನಕೊಟ್ಟು ಮಕ್ಕಳಿಗೂ ಅರ್ಥ ಮಾಡಿಸುವ ಅಶ್ಯಕತೆಯಿದೆ ಎಂದು ಅಭಿಪ್ರಾಯಪಟ್ಟರು.

ನಿವೃತ್ತ ಐ.ಎಫ್.ಎಸ್. ಅಧಿಕಾರಿ



ಹಾಗೂ ಸಾಹಿತಿ ಕೆ.ವಿ. ಲಕ್ಷ್ಮಣ ಮೂರ್ತಿ ಅವರು ಮಾತನಾಡಿ, ನಮ್ಮ ಕನ್ನಡ ಭಾಷೆಯನ್ನು ಪ್ರಧಾನ ಸ್ಥಾನದಲ್ಲಿಟ್ಟು ಕಲಿಸಬೇಕು. ಕನ್ನಡ ಶಾಲೆಗಳು ಮುಚ್ಚುವುದನ್ನು ತಪ್ಪಿಸಲಿಕ್ಕಾಗಿ ಎಲ್ಲರೂ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕು. ನಮ್ಮ ರಾಜ್ಯದ ಹೆಮ್ಮೆ ಚನ್ನಪಟ್ಟಣದ ಗೊಂಬೆಯ ಕಲೆಯನ್ನು ಪ್ರೋತ್ಸಾಹಿಸುವ ಕೆಲಸವಾಗಬೇಕು ಎಂದು ಅವರು ಹೇಳಿದರು.

ಹಾಸನ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಬಾ.ನಂ. ಲೋಕೇಶ್ ಅವರು ಮಾತನಾಡಿ, ಹಳ್ಳಿಗಳಲ್ಲಿ ಕನ್ನಡ ರಾಜ್ಯೋತ್ಸವದಂತಹ ಕಾರ್ಯಕ್ರಮ ಕಳೆದ ಇಪ್ಪತ್ತೇಳು ವರ್ಷಗಳಿಂದ ಸತತವಾಗಿ ನಡೆಸಿಕೊಂಡು ಬರುತ್ತಿರುವ ಮಂಗಳ ಕಲಾ ಸಾಹಿತ್ಯ ವೇದಿಕೆಯ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರಲ್ಲದೆ, ಕನ್ನಡ ಉಳಿಸಲು, ಬಳೆಸಲು ಇರುವ ಭಾಷೆಯಲ್ಲ. ನಮ್ಮ ಜೀವನದ ಸರ್ವ ರಂಗಗಳಲ್ಲೂ ಅಳವಡಿಸಿಕೊಂಡು ಭಾಷೆಯ ಪ್ರೌಢಿಮೆಯನ್ನು ತೋರಿಸುವ ಕೆಲಸ ಆಗಬೇಕೆಂದು ಹೇಳಿದರು.

ಕೆ.ಎಸ್.ಮಂಜೇಗೌಡ, ಹೇಮಾ ಲೋಕೇಶ್, ಸಮಾಜ ಸೇವಕ ಮುರಳಿ ಮೋಹನ್, ಎನ್.ಜೆ.ಮಂಜುನಾಥ್, ಕಟ್ಟೆಗದ್ದೆ ನಾಗರಾಜ್, ಹೆಚ್.ಡಿ. ಗೋಪಾಲ್, ಹೈದೂರು ಜಯಣ್ಣ ಮುಂತಾದವರು ಮಾತನಾಡಿದರು.

ನಿವೃತ್ತ ಸೈನಿಕ ಹೆಚ್.ಕೆ. ವೆಂಕಟೇಶ್, ಲೇಖಕಿ ಡಿ. ಸುಜಲಾ ದೇವಿ ಹಾಗೂ ನಮ್ಮ ನಡಿಗೆ ಸರಕಾರಿ ಶಾಲೆಯ ಕಡೆಗೆ ಅಭಿಯಾನದ ಮಂಜುನಾಥ್ ಕಾಳಿಂಗಪ್ಪ ಅವರನ್ನು ಗೌರವಿಸಲಾಯಿತು.

ಸತ್ಯ ಹರಿಹಳ್ಳಿ, ಪ್ರಕಾಶ್, ಹೆಚ್.ಡಿ. ಕೃಷ್ಣಮೂರ್ತಿ, ಸಿದ್ದಬಸವೇಗೌಡ, ಜಿ.ಜಿ.ನಾರಾಯಣ ಶರ್ಮ, ಕಿರಣ್, ಮಲ್ಲೇಶ್, ಚಂದ್ರಶೇಖರ್, ತೇಜಾವತಿ, ಮಂಜುಳಾ ನಾಗರಾಜ್ ಉಪಸ್ಥಿತರಿದ್ದರು. ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು.

## ಪರೀಕ್ಷೆಗಳಿಗೆ ಭಯಪಡದೆ ಧೈರ್ಯದಿಂದ ಎದುರಿಸಬೇಕು



• ಪ್ರಜೋದಯ ವರದಿ

**ಅರಕಲಗೂಡು:** ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಭಯಪಡದೆ ಧೈರ್ಯದಿಂದ ಎದುರಿಸಬೇಕು ಎಂದು ಸಂಗೀತ ವಿದ್ವಾಂಸರಾದ ಆರ್.ಕೆ. ಪದ್ಮನಾಭ್ ತಿಳಿಸಿದರು.

ಶಿಕ್ಷಣ ಇಲಾಖೆ ಸೋಮವಾರ ನಿಧಾನಗತಿ ಕಲಿಕೆಯ ಸರ್ಕಾರಿ ಪ್ರೌಢಶಾಲೆಗಳ 10 ನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪಠ್ಯಾಧಾರಿತ ರಸಪ್ರಶ್ನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಫಲಿತಾಂಶ ಉತ್ತಮ ಗೊಳಿಸಲು ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ರಸ ಪ್ರಶ್ನೆ ಕಾರ್ಯಕ್ರಮದ ಹಮ್ಮಿಕೊಂಡಿರುವುದು ಉತ್ತಮ ಕಾರ್ಯ ಎಂದು ಹೇಳಿದರು.

ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕಾಗಿ ಸತತ ಪ್ರಯತ್ನ ನಡೆದಿದ್ದು ವಿದ್ಯಾರ್ಥಿಗಳು ಸಾಧನೆಯ ಮೂಲಕ ಗುರು ದಕ್ಷಿಣೆ ನೀಡಬೇಕು. ಜಿಲ್ಲಾ ಮಟ್ಟದಲ್ಲಿ ಮೂರನೆ ಸ್ಥಾನದಲ್ಲಿರುವ ತಾಲ್ಲೂಕು ಮೊದಲ ಸ್ಥಾನಕ್ಕೆ ಏರುವಂತಾಗಬೇಕು, ಸರ್ಕಾರಿ ಶಾಲೆಯಲ್ಲಿ ಓದುವ 10 ನೇ ತರಗತಿ ಪರೀಕ್ಷೆಯಲ್ಲಿ ಮೊದಲ ಸ್ಥಾನಗಳಿಸುವ ವಿದ್ಯಾರ್ಥಿಗೆ 15 ಸಾವಿರ ರೂ. ನಗದು ಬಹುಮಾನವನ್ನು ಪ್ರತಿ ವರ್ಷ ನೀಡುವುದಾಗಿ ಹೇಳಿದರು.

ತಹಶೀಲ್ದಾರ್ ಕೆ.ಸಿ.ಸೌಮ್ಯ ಅವರು ಮಾತನಾಡಿ, ಒತ್ತಡಗಳಿಗೆ ಒಳಗಾಗದೆ ವಿದ್ಯಾರ್ಥಿಗಳು ಸಾಧನೆಯ ಕಡೆಗೆ ಗಮನ ಹರಿಸಬೇಕು, ಅಂಕಗಳನ್ನು ಗಳಿಸುವುದಷ್ಟಕ್ಕೆ ಸೀಮಿತರಾಗದೆ ಬದುಕಿನ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಹೇಳಿದರು.

ಬಿಇಒ ಕೆ.ಪಿ. ನಾರಾಯಣ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಂಗಸ್ವಾಮಿ, ತಾಲ್ಲೂಕು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಮಧುಕರ್, ಕಾರ್ಯದರ್ಶಿ ಬೊರಣ್ಣಗೌಡ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಜಗದೀಶ, ಕಾರ್ಯದರ್ಶಿ ವಿವೇಕಾನಂದ ಇನ್ನಿತರರು ಉಪಸ್ಥಿತರಿದ್ದರು.

## ಜಿಲ್ಲೆಯ 100 ಅಂಗನವಾಡಿಗಳಲ್ಲಿ ಇಂಗ್ಲಿಷ್ ಮಿಡಿಯಂ

» ಮೊದಲನೇ ಪುಟದಿಂದ

**1,300 ಮಕ್ಕಳಿಗೆ ಅನುಕೂಲ**

ಜಿಲ್ಲಾದ್ಯಂತ 66,000 ಮಕ್ಕಳು ಈಗಾಗಲೇ ಪೂರ್ವ ಪ್ರಾಥಮಿಕ ಶಿಕ್ಷಣ ಪಡೆಯುತ್ತಿದ್ದಾರೆ. ಎಲ್‌ಕೆಜಿಗೆ 4-5 ವರ್ಷದ 800 ಹಾಗು ಯುಕೆಜಿಗೆ 500 ಮಕ್ಕಳು ಸೇರಿ ವಯಸ್ಸಿಗನುಗುಣವಾಗಿ 1,300 ಮಕ್ಕಳು ದಾಖಲಾಗಬಹುದು. ಸಾವಿರಾರು ರೂ. ಡೊನೇಶನ್ ನೀಡಿ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸಲು ಸಾಧ್ಯವಿಲ್ಲದ ಪೋಷಕರಿಗೆ ಈ ಕಾರ್ಯಕ್ರಮ ವರದಾನವಾಗುತ್ತದೆ ಎಂದು ಭಾವಿಸಲಾಗುತ್ತಿದೆ.

**ಅಂಗನವಾಡಿ ಶಿಕ್ಷಕಿಯರಿಗೆ ತರಬೇತಿ**

ಎಲ್‌ಕೆಜಿ ಹಾಗು ಯುಕೆಜಿ ಶಿಕ್ಷಣವನ್ನು ಪರಿಣಾಮಕಾರಿಯಾಗಿ ಬೋಧಿಸುವ ನಿಟ್ಟಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ವಿದ್ಯಾರ್ಹತೆ ಅನುಗುಣವಾಗಿ ತರಬೇತಿ ನೀಡಲಾಗಿದೆ. 500 ಮೀ. ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಟ್ಯಾಗ್ ಮಾಡುವುದರ ಮೂಲಕ ಸಂಖ್ಯೆಯನ್ನು ನಿರ್ಧರಿಸಲಾಗುವುದು. ಬೆಳಿಗ್ಗೆ 10 ರಿಂದ 12 ಗಂಟೆವರೆಗೆ ಎಲ್‌ಕೆಜಿ ಹಾಗು ಯುಕೆಜಿ ಶಿಕ್ಷಣಕ್ಕೆ ವೇಳಾಪಟ್ಟಿ ನಿಗದಿಪಡಿಸಿ ನಂತರದ ಅವಧಿಯಲ್ಲಿ ಅಂಗನವಾಡಿ ಕಾರ್ಯ ಚಟುವಟಿಕೆಗಳು ಮುಂದುವರಿಯಲಿವೆ.

ಜಿಲ್ಲೆಯಲ್ಲಿ ಆಯ್ದ 701 ಅಂಗನವಾಡಿ ಕೇಂದ್ರಗಳಲ್ಲಿ ಸಕ್ಷಮ್ ಯೋಜನೆಯಡಿ ಟಿವಿ ಮತ್ತು ಇನ್ನಿತರ ಉಪಕರಣಗಳನ್ನು ಈಗಾಗಲೇ ಖರೀದಿಸಲಾಗಿದೆ. ಟಿವಿ ವೀಕ್ಷಣೆ ಮೂಲಕ ಮಕ್ಕಳ ಕಲಿಕೆಗೆ ಉತ್ತೇಜನ ನೀಡುವ ಜೊತೆಗೆ ಪೂರ್ವ ಪ್ರಾಥಮಿಕ ಶಿಕ್ಷಣ ಫಲಪ್ರದವಾಗಬೇಕೆಂಬ ಆಶಯ ಹೊಂದಲಾಗಿದೆ. ಜೊತೆಗೆ ಆಯ್ಕೆಯಾಗಿರುವ ಅಂಗನವಾಡಿ ಕೇಂದ್ರಗಳಲ್ಲಿ ಕೈತೋಟ ನಿರ್ಮಿಸಿ ನಾನಾ ತರಕಾರಿ ಬೆಳೆದು ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಿ ಅಪೌಷ್ಟಿಕತೆ ಹೋಗಲಾಡಿಸುವ ಗುರಿಯನ್ನು ಸಹ ಹೊಂದಲಾಗಿದೆ.

**ಅಂಗನವಾಡಿಗಳಿಗೆ ಸುವರ್ಣ ಸಂಭ್ರಮ**

1975ರ ಅ.2ರಂದು ದೇಶಾದ್ಯಂತ ಮಕ್ಕಳಿಗೆ ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವ ಸಲುವಾಗಿ ಅಂಗನವಾಡಿ ಕೇಂದ್ರಗಳನ್ನು ಆರಂಭಿಸಲಾಯಿತು. 2025ರ ಅ.2ಕ್ಕೆ 75 ವರ್ಷ ಪೂರೈಸಿ ಸುವರ್ಣ ಸಂಭ್ರಮದ ಹೊಸ್ತಿಲಲ್ಲಿರುವುದರಿಂದ ಎಲ್‌ಕೆಜಿ ಹಾಗು ಯುಕೆಜಿಗೆ ಅಧಿಕೃತ ಚಾಲನೆ ನೀಡಲಾಗುತ್ತಿದೆ.

## ಕಾಂಗ್ರೆಸ್‌ನಿಂದ ಶಾಸಕರ ಖರೀದಿ ಭರಾಟೆ: ಆರ್.ಅಶೋಕ್

• ಪ್ರಜೋದಯ ವರದಿ



**ಬೆಂಗಳೂರು:** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಗೊಂದಲ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಪ್ರಸ್ತುತ ಸರ್ಕಾರ ಶೇ.60 ರಷ್ಟು ಭ್ರಷ್ಟಾಚಾರದಲ್ಲಿ ತೊಡಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಆರೋಪಿಸಿದ್ದಾರೆ.

ಕಳೆದ ಎರಡು ವರ್ಷಗಳಿಂದ, ಅಧಿಕಾರ ಮತ್ತು ಮುಖ್ಯಮಂತ್ರಿ ಕುರ್ಚಿಗಾಗಿ ಜಗಳ ನಡೆಯುತ್ತಿದೆ. ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವೆ ಅಧಿಕಾರಕ್ಕಾಗಿ ಹೋರಾಟ ನಡೆಯುತ್ತಿರುವುದರಿಂದ ಶಾಸಕರ ಖರೀದಿ ನಡೆಯುತ್ತಿದೆಯೆಂಬ ವರದಿಗಳಿವೆ ಎಂದು ದೂರಿದರು. ಕರ್ನಾಟಕದಲ್ಲಿ ನಮಗೆ ಚುನಾವಣೆ ಬೇಕು. ಏಕೆಂದರೆ ರಾಜ್ಯದಲ್ಲಿ ಶೇ.60 ರಷ್ಟು ಭ್ರಷ್ಟ ಸರ್ಕಾರವಿದೆ. ಈ ಸರ್ಕಾರ ತೊಲಗಬೇಕು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಯಾವ ಅಧಿಕಾರವಿಲ್ಲ. ಸೋನಿಯಾ ಗಾಂಧಿ ಅವರ ಬಳಿ ಮಾತ್ರ ಅಧಿಕಾರ ಇದೆ. ಎಐಸಿಸಿ ಅಧ್ಯಕ್ಷರ ಬಳಿ ಯಾವುದೇ ಅಧಿಕಾರವಿಲ್ಲ ಎಂದರು.

ಮಲ್ಲಿಕಾರ್ಜುನ ಖರ್ಗೆ ಅವರು ತಾವು ಅಧ್ಯಕ್ಷ ಅನ್ನೋದನ್ನೇ ಮರೆತಿದ್ದಾರೆ. ಹೆಸರಿಗೆ ಮಾತ್ರ ಅವರು ಅಧ್ಯಕ್ಷರು, ಅವರ ಕೀ ಇರುವುದು ಗಾಂಧಿ ಫ್ಯಾಮಿಲಿ ಬಳಿ ಎಂದು ವ್ಯಂಗ್ಯವಾಡಿದರು.

100 ವರ್ಷಗಳಿಗೂ ಹೆಚ್ಚು ಇತಿಹಾಸ ಹೊಂದಿರುವ ಕಾಂಗ್ರೆಸ್ ಪಕ್ಷದಲ್ಲಿ ಅವರ ಶಾಸಕರನ್ನು ಅವರೇ ಖರೀದಿ ಮಾಡುವ ಕೆಟ್ಟ ವ್ಯವಸ್ಥೆ ಹಿಂದೆಂದೂ ಕಂಡಿರಲಿಲ್ಲ. ಈಗ 100 ಕೋಟಿ ರೂ. ವರೆಗೆ ಕುದುರೆ ವ್ಯಾಪಾರ ನಡೆಯುತ್ತಿದೆ. ಕಾಂಗ್ರೆಸ್‌ನಲ್ಲಿ ಅವರ ಶಾಸಕರನ್ನು ಅವರೇ ಖರೀದಿ ಮಾಡುತ್ತಿದ್ದಾರೆ. ಇದು ಕಾಂಗ್ರೆಸ್ ಸರ್ಕಾರವಾ ಅಥವಾ ಸಮ್ಮಿಶ್ರ ಸರ್ಕಾರವಾ ಎಂದು ಅನುಮಾನ ಮೂಡುತ್ತಿದೆಯೆಂದು ಕಳವಳ ವ್ಯಕ್ತಪಡಿಸಿದರು.



ಒಬ್ಬೊಬ್ಬರು ಶಾಸಕರ ಖರೀದಿಗೆ 60 ರಿಂದ 100 ಕೋಟಿ ರೂ. ಕೊಡಲಾಗುತ್ತಿದೆ. ಜೊತೆಗೆ ಕಾರು, ಫ್ಲ್ಯಾಟ್ ಗಿಫ್ಟ್ ಕೊಡುತ್ತಿದ್ದಾರೆ. ಮುಂದೆ ಅದನ್ನ ಜನರ ತಲೆ ಮೇಲೆ ಹಾಕ್ತಾರೆ, ಇದೆಲ್ಲವನ್ನ ಜನರ ಮುಂದೆ ಇಡ್ತೇವೆಂದು ವಾಗ್ದಾಳಿ ನಡೆಸಿದರು.

### ಸರ್ಕಾರದ ವಿರುದ್ಧ ಹೋರಾಟ

ರೈತರ ಆತ್ಮಹತ್ಯೆಯ ವಿಷಯದ ಕುರಿತು ನ. 27, 28 ಮತ್ತು ಡಿ.1 ಮತ್ತು 2ರಂದು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ಪ್ರತಿಭಟನೆ ನಡೆಸಲಿವೆ ಎಂದು ಅವರು ಹೇಳಿದರು. ರಾಜ್ಯದಲ್ಲಿ 2000ಕ್ಕೂ ಹೆಚ್ಚು ರೈತರು ಪ್ರಾಣ ಕಳೆದುಕೊಂಡಿದ್ದಾರೆ. ಪ್ರವಾಹ ಪೀಡಿತ ಪ್ರದೇಶಗಳಿಗೆ ಅವರು ಯಾವ ಹಣವನ್ನು ಬಿಡುಗಡೆ ಮಾಡಿಲ್ಲ, ಕಬ್ಬಿಗೆ, ರೈತರಿಗೆ ಯಾವುದೇ ಮೊತ್ತವನ್ನು ಪಾವತಿಸಿಲ್ಲ, ನಾವು ಪ್ರತಿ ಜಿಲ್ಲೆಯಲ್ಲೂ ಪ್ರತಿಭಟನೆ ಮಾಡುತ್ತೇವೆಂದರು.

ಮುಖ್ಯಮಂತ್ರಿ ಕುರ್ಚಿಗಾಗಿ ಕಾದಾಟ ನಡೆಯುತ್ತಿರುವುದರಿಂದ ರೈತರ ಸಮಸ್ಯೆಗಳ ಬಗ್ಗೆ ಸರ್ಕಾರ ಗಮನ ಹರಿಸುತ್ತಿಲ್ಲ, ಸರ್ಕಾರದ ರೈತರ ವಿರೋಧಿ ನಿಲುವಿನ ವಿರುದ್ಧ ಬಿಜೆಪಿ ರೈತ ಮೋರ್ಚಾ ವತಿಯಿಂದ ಹೋರಾಟ ಮಾಡಲಾಗುತ್ತಿದೆ ಎಂದು ಹೇಳಿದರು.

## ರಾಜ್ಯ ಪತ್ರಕರ್ತರ ಸಂಘದ ಪದಾಧಿಕಾರಿಗಳ ಪದಗ್ರಹಣ



**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭ ಸೋಮವಾರ ಗಾಂಧಿ ಭವನದಲ್ಲಿ ನಡೆಯಿತು.

ಮೂರನೇ ಅವಧಿಗೆ ಸಂಘದ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಟಿ.ವಿ.ಶಿವನಂದ ತಗಡೂರು, ಉಪಾಧ್ಯಕ್ಷರಾಗಿ ಹೆಚ್.ಬಿ.ಮದನಗೌಡ, ಮತ್ತಿಕೆರೆ ಜಯರಾಮ್, ಅಜ್ಜಮಾಡ ರಮೇಶ್ ಕುಟ್ಟಪ್ಪ, ಪ್ರಧಾನ ಕಾರ್ಯದರ್ಶಿ ಸಿ.ಜಿ. ಲೋಕೇಶ್, ಕಾರ್ಯದರ್ಶಿಗಳಾಗಿ ಪುಂಡಲಿಕ ಬಿ.ಬಾಲೋಜಿ, ಸೋಮಶೇಖರ್ ಕೆರಗೋಡು, ನಿಂಗಪ್ಪ ಚಾವಡಿ ಹಾಗು ಖಜಾಂಚಿಯಾಗಿ ವಾಸುದೇವ್ ಹೊಳ್ಳ ಸೇರಿ ಹಲವರು ಅಧಿಕಾರ ಸ್ವೀಕಾರ ಮಾಡಿದರು.

ಇದೇ ವೇಳೆ ಅರಣ್ಯ ಸಚಿವ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ರಾಜ್ಯ ಹಾಗು ಜಿಲ್ಲಾ ಅಧ್ಯಕ್ಷರು, ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿದರು. ಹಿರಿಯ ಪತ್ರಕರ್ತ ನಾಗಮಣಿ ಎಸ್.ರಾವ್, ರಾಷ್ಟ್ರೀಯ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಸೇರಿ ಅನೇಕ ಗಣ್ಯರು ಹಾಜರಿದ್ದರು.

ರಾಜ್ಯದ 31 ಜಿಲ್ಲೆಗಳಿಂದ ಆಯ್ಕೆಯಾದ ನೂತನ ಜಿಲ್ಲಾ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು ಹಾಗು ರಾಜ್ಯ ಕಾರ್ಯಕಾರಿ ಸಮಿತಿಯ ಸದಸ್ಯರನ್ನು ಅಭಿನಂದಿಸಲಾಯಿತು. ಹಾಸನ ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಪ್ರಧಾನಕಾರ್ಯದರ್ಶಿ ಕೆ.ಜಿ.ಸುರೇಶ್ ಇತರರು ಭಾಗವಹಿಸಿದ್ದರು.

## ಕಟ್ಟಾಯ ಹೋಬಳಿ ವ್ಯಾಪ್ತಿಯಲ್ಲಿ ಹಲವು ಕಾಮಗಾರಿಗೆ ಚಾಲನೆ

» ಮೊದಲನೇ ಪುಟದಿಂದ

ಬಸವೇಶ್ವರ ಸ್ವಾಮಿ ದೇವಾಲಯ ಮತ್ತು ಆಂಜನೇಯ ಸ್ವಾಮಿ ದೇವಾಲಯದ ಕಾಂಪೌಂಡ್ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಈ ವೇಳೆ ಗ್ರಾಮದ ಕುಂದುಕೊರತೆಗಳು, ಮೂಲಭೂತ ಸೌಕರ್ಯಗಳು ಹಾಗು ಆಗಬೇಕಿರುವ ಅಭಿವೃದ್ಧಿ ಕಾರ್ಯಗಳ ಕುರಿತು ಗ್ರಾಮಸ್ಥರಿಂದ ಮಾಹಿತಿ ಪಡೆದುಕೊಂಡರು.

ಚನ್ನಂಗಿಹಳ್ಳಿ ಗ್ರಾಮದಲ್ಲಿ 15 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಮತ್ತು ಒಳಚರಂಡಿ, ಬ್ಯಾಡರಹಳ್ಳಿ ಯಲ್ಲಿ 14 ಲಕ್ಷ ರೂ. ವೆಚ್ಚದಲ್ಲಿ ಬ್ಯಾಡರಹಳ್ಳಿ ಕಾಲೋನಿಯಿಂದ ಬ್ಯಾಡರಹಳ್ಳಿ ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ, ಜೆಜೆಎಂ ಕಾಮಗಾರಿಯ ಪರಿಶೀಲನೆ ನಡೆಸಿದರು. ಶಂಕರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲಪ್ಪನ ಹಳ್ಳಿ ಗ್ರಾಮ ಪರಿಮಿತಿಯಲ್ಲಿ 6 ಲಕ್ಷ ರೂ. ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

## ಜೋಳಕ್ಕೆ 3 ಸಾವಿರ ರೂ. ಬೆಂಬಲ ಬೆಲೆ ನಿಗದಿಗೆ ಆಗ್ರಹ

» ಮೊದಲನೇ ಪುಟದಿಂದ

ಕೆಎಂಎಫ್‌ಕೆ ಪೂರೈಕೆ ಮಾಡಲಾಗುತ್ತಿದೆ. ಪರಿಸ್ಥಿತಿ ಹೀಗಿದ್ದರೂ ಜಿಲ್ಲೆಯ ಡೇರಿ ಅಧ್ಯಕ್ಷರು ಏನು ಮಾಡುತ್ತಿದ್ದಾರೆಂದು ಪ್ರಶ್ನಿಸಿದ ಅವರು, ಜಿಲ್ಲೆಯ ಏಳು ಮಂದಿ ಶಾಸಕರು ರೈತರ ನೆರವಿಗೆ ಧಾವಿಸಬೇಕು. ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಕೇವಲ ಸದನದಲ್ಲಿ ಮಾತನಾಡುವುದಲ್ಲ ಜಿಲ್ಲೆಯ ರೈತರ ಸಮಸ್ಯೆಗೆ ಸ್ಪಂದಿಸಬೇಕೆಂದು ಆಗ್ರಹಿಸಿದರು.

ರೈತ ಮುಖಂಡರಾದ ಬಳ್ಳೂರು ಸ್ವಾಮಿಗೌಡ ಅವರು ಮಾತನಾಡಿ, ಮೆಕ್ಕೆ ಜೋಳಕ್ಕೆ ಬೆಂಬಲ ಬೆಲೆಯಾಗಿ ಕೇಂದ್ರ ಸರ್ಕಾರ 2,400 ಹಾಗು ರಾಜ್ಯ ಸರ್ಕಾರ ವಂತಿಕೆ 600 ಸೇರಿ 3000 ದರ ನಿಗದಿ ಮಾಡಬೇಕು. ಖರೀದಿ ಕೇಂದ್ರ ತೆರೆದು ರೈತರಿಗೆ ನೆರವಿಗೆ ಧಾವಿಸಬೇಕು ಮತ್ತು ಕೆಎಂಎಫ್ ಮೂಲಕ ರೈತರ ಜೋಳ ಖರೀದಿ ಮಾಡಲು ಸೂಕ್ತ ನಿರ್ದೇಶನ ನೀಡಬೇಕು. ಇಲ್ಲವಾದರೆ ನಮ್ಮ ಹೋರಾಟವನ್ನು ತೀವ್ರಗೊಳಿಸಲಾಗುವುದೆಂದು ಹೇಳಿದರು.

ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಇಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಆಯಾ ಜಿಲ್ಲೆಯ ಶಾಸಕರು ರೈತರ ನೆರವಿಗೆ ಧಾವಿಸಬೇಕು. ನಾವು ಯಾವುದೇ ಹುಡುಗಾಟಕ್ಕೆ ಹೋರಾಟ ಮಾಡುತ್ತಿಲ್ಲ. ರೈತರ ಸಮಸ್ಯೆಯನ್ನು ಸರ್ಕಾರದ ಬಳಿ ಹೇಳುತ್ತಿದ್ದೇವೆ. ಅದಕ್ಕೆ ಸೂಕ್ತ ಸ್ಪಂದನೆ ಸಿಗಬೇಕು. ಕೇಂದ್ರ ಹಾಗು ರಾಜ್ಯ ಸರ್ಕಾರದ ಮುಸುಕಿನ ಗುದ್ದಾಟದ ನಡುವೆ ರೈತರಿಗೆ ಅನ್ಯಾಯವಾಗುತ್ತಿದೆ. ರಾಜ್ಯದಲ್ಲಿ 55 ಲಕ್ಷ ಮೆಟ್ರಿಕ್ ಟನ್ ಮುಸುಕಿನ ಜೋಳ ಬೆಳೆಯಲಾಗಿದೆ. ಈ ನಡುವೆ ಕೇಂದ್ರ ಸರ್ಕಾರ ಉಕ್ರೇನ್ ದೇಶದಿಂದ 70 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿ ಮಾಡಿರುವುದು ಎಷ್ಟುಸರಿ ಎಂದು ಪ್ರಶ್ನಿಸಿದ ಅವರು, ಕೇಂದ್ರ ಸರ್ಕಾರದ ಇಂತಹ ನೀತಿ ವಿರುದ್ಧ ರಾಜ್ಯದಲ್ಲಿ ರೈತರು ಹೋರಾಟ ಮಾಡಲು ಹೊರಟಿದ್ದೇವೆ ಕೂಡಲೇ ಕೇಂದ್ರ ಹಾಗು ರಾಜ್ಯ ಸರ್ಕಾರ ಹೋರಾಟಕ್ಕೆ ಸ್ಪಂದಿಸಬೇಕೆಂದು ಒತ್ತಾಯಿಸಿದರು.

ರೈತರ ಮುಖಂಡರಾದ ಮಂಜು ಬಿಟ್ಟಗೌಡನಹಳ್ಳಿ, ಪ್ರಕಾಶ್ ಮರ್ಕುಲಿ, ಶಿವಕುಮಾರ್, ಭುವನೇಶ್, ಮನು ಕಿರಗಡಲು, ಮಗ್ಗೆ ಪ್ರಕಾಶ್, ಹಾಲಪ್ಪ ಇದ್ದರು.

## ದೇವರ ಸ್ಮರಣೆಯಿಂದ ನೆಮ್ಮದಿ ಬದುಕು ಸಾಧ್ಯ



• ಪ್ರಜೋದಯ ವರದಿ

**ಅರಸೀಕೆರೆ:** ದೇವರ ಸ್ಮರಣೆ ಹಾಗು ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವುದರಿಂದ ಮನುಷ್ಯ ನೆಮ್ಮದಿ ಪಡೆಯಲು ಸಾಧ್ಯವೆಂದು ತಿಪಟೂರು ತಾಲ್ಲೂಕು ಕೆರಗೋಡಿ ರಂಗಾಪುರ ಶ್ರೀಮಠದ ಪೀಠಾಧಿಪತಿ ಶ್ರೀ ಗುರುಪರದೇಶೀಕೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಚಲುವನಹಳ್ಳಿಯ ಗವಿಮಠದ ಆವರಣದಲ್ಲಿ ನಿರ್ಮಿಸಿರುವ ಶ್ರೀಗುರು ಭಜನಾ ಮಂದಿರ ಲೋಕಾರ್ಪಣೆಗೊಳಿಸಿ ನಂತರ ನಡೆದ ಧಾರ್ಮಿಕ ಸಮಾರಂಭದಲ್ಲಿ ಮಾತನಾಡಿ, ಸದ್ಗುರು ಸಿದ್ದಮಲ್ಲಾರ್ಯರ ತಪೋ ಮಹಿಮೆಯ ಪುಣ್ಯ ಭೂಮಿಯಲ್ಲಿ ಶ್ರೀಗುರು ಸಪ್ತಾಹ ಸೇರಿ ವಿವಿಧ ಧಾರ್ಮಿಕ ಕೈಂಕರ್ಯಗಳು ನಿತ್ಯ ನಿರಂತರವಾಗಿ ನಡೆಯುತ್ತಿವೆ. ಮಹಾಮಹಿಮರ ಆಧ್ಯಾತ್ಮಿಕ ತತ್ವ, ಚಿಂತನೆ ಹಾಗು ಆದರ್ಶಗಳನ್ನು ಪಾಲಿಸಿದರೆ ಬದುಕು ಹಸನಾಗುವ ಜೊತೆಗೆ ಮೋಕ್ಷ ಪಡೆಯಲು ಸಾಧ್ಯವಾಗಲಿದೆ. ದಾನಿಗಳು ಹಾಗು ಭಕ್ತರ ಸಹಕಾರದಿಂದ ನಿರ್ಮಾಣಗೊಂಡಿರುವ ಭಜನಾಮಂದಿರ ಧಾರ್ಮಿಕ ಸತ್ಕಾರ್ಯಗಳಿಗೆ ಸದ್ಬಳಕೆಯಾಗಲೆಂದು ಆಶಿಸಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಬಿ.ಎಸ್.ಅರುಣ್ ಕುಮಾರ್ ಅವರು ಮಾತನಾಡಿ, 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ಸಮ ಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದಿದ್ದಾರೆ. ಅಂತಹ ಮಹನೀಯರು ಹಾಕಿಕೊಟ್ಟ ಮಾರ್ಗದಲ್ಲಿ ಕೆರಗೋಡಿ ರಂಗಾಪುರದ ಶ್ರೀಮಠ ಕಾರ್ಯೋನ್ಮುಖವಾಗಿರುವುದು ಹೆಮ್ಮೆಯ ಸಂಗತಿ. ಹಸಿದವರಿಗೆ ಅನ್ನ, ಅಕ್ಷರ, ಅರಿವು ನೀಡಿ ಬೆಳಕಿನೆಡೆಗೆ ಕೊಂಡೊಯ್ಯುತ್ತಿರುವ ಸ್ವಾಮೀಜಿಯವರ ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದು ಬಣ್ಣಿಸಿದರು.

ಶ್ರೀಕ್ಷೇತ್ರಾಭಿಮಾನಿಗಳ ಸಂಘದ ಅಧ್ಯಕ್ಷ ಯು.ಕೆ.ಶಿವಪ್ಪ ಮಾತನಾಡಿದರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಜಾವಗಲ್ ರಾಜಶೇಖರ್, ಇಂಜಿನಿಯರ್ ಪ್ರಕಾಶ್, ಬಸವರಾಜು, ಗುತ್ತಿಗೆದಾರ ಹರೀಶ್, ಕಾಟೀಕೆರೆ ಶಂಕರಪ್ಪ, ಲೋಕೇಶ್ ಹಾಜರಿದ್ದರು.

## ಡಿ.ಕೆ.ಶಿವಕುಮಾರ್ ಪರ 63 ಶಾಸಕರು: ಗುಪ್ತಚರ ಮಾಹಿತಿ

» ಮೊದಲನೇ ಪುಟದಿಂದ

**ಮುಖ್ಯಮಂತ್ರಿಗೆ 50 ಶಾಸಕರ ಪಟ್ಟಿ**

ಸಂಪುಟದ 13 ಸಚಿವರು ಶಿವಕುಮಾರ್ ಪರ ಇದ್ದಾರೆ ಎಂದಿರುವ ಗುಪ್ತಚರ ವಿಭಾಗ ಕೆಲವರ ಹೆಸರು ಸೇರಿಸಿ 50 ಶಾಸಕರ ಪಟ್ಟಿಯನ್ನು ಮುಖ್ಯಮಂತ್ರಿ ಅವರಿಗೆ ನೀಡಿದೆ. ಮುಂದಿನ ಒಂದು ವಾರದಲ್ಲಿ ಈ ಸಂಖ್ಯೆ ಹೆಚ್ಚುವ ಸಾಧ್ಯತೆ ತಳ್ಳಿ ಹಾಕುವಂತಿಲ್ಲ ಎಂಬ ಮಾಹಿತಿ ಕೊಟ್ಟಿದೆ.

ಮುಖ್ಯಮಂತ್ರಿ ಅವರಿಗೆ ತಲುಪಿಸಿರುವ ಪಟ್ಟಿಯಲ್ಲಿ ಶಿವಕುಮಾರ್ ಪರವಾಗಿ ಬಾಲಕೃಷ್ಣ (ಮಾಗಡಿ), ಉದಯಕುಮಾರ್ (ಮದ್ದೂರು), ರವಿಕುಮಾರ್ ಗೌಡ (ಗಣಿಗ) (ಮಂಡ್ಯ), ಎಚ್.ಎ.ಇಕ್ಬಾಲ್ ಹುಸೇನ್ (ರಾಮನಗರ), ಮಂಥರ್‌ಗೌಡ (ಮಡಿಕೇರಿ), ಶರತ್ ಬಚ್ಚೇಗೌಡ (ಹೊಸ ಕೋಟೆ) ಶಿವಣ್ಣ (ಆನೇಕಲ್), ಶ್ರೀನಿವಾಸ್ (ಪುಲಿಕೇಶಿನಗರ), ಎನ್.ಎ.ಹ್ಯಾರಿಸ್ (ಶಾಂತಿನಗರ), ರಾಜೇಗೌಡ (ಶೃಂಗೇರಿ), ತಮ್ಮಯ್ಯ (ಚಿಕ್ಕಮಗಳೂರು), ಡಿ. ಸುಧಾಕರ್ (ಹಿರಿಯೂರು), ಬಸವರಾಜ ಶಿವಗಂಗಾ (ಚನ್ನಗಿರಿ), ವೀರೇಂದ್ರ ಪಪ್ಪಿ (ಚಿತ್ರದುರ್ಗ), ಲಕ್ಷ್ಮೀ ಹೆಬ್ಬಾಳ್ಕರ್ (ಬೆಳಗಾವಿ ಗ್ರಾಮೀಣ), ಸಿ.ಪಿ. ಯೋಗೇಶ್ವರ್ (ಚನ್ನಪಟ್ಟಣ), ಜಯಚಂದ್ರ (ಶಿರಾ), ತನ್ವೀರ್ ಸೇಠ್ (ನರಸಿಂಹರಾಜ), ಗಣೇಶ್ ಹುಕ್ಕೇರಿ (ಚಕ್ಕೋಡಿ ಸದಲಗಾ), ಯಶವಂತ ರಾಯಗೌಡ ಪಾಟೀಲ್ (ಇಂಡಿ), ಲಕ್ಷ್ಮಣ ಸವದಿ (ಅಥಣಿ), ವಿನಯ್ ಕುಮಾರ್ (ಧಾರವಾಡ ಗ್ರಾಮೀಣ), ರಂಗನಾಥ್ (ಕುಣಿಗಲ್), ರಾಜುಕಾಗೆ (ಕಾಗವಾಡ), ಮಹೇಂದ್ರ ತಮ್ಮಣ್ಣವರ್ (ಕುಡಚಿ), ಶರಣಬಸಪ್ಪ ದರ್ಶನಾಪುರ (ಶಹಪುರ), ಶಿವಾನಂದ ಪಾಟೀಲ್ (ಬಸವನ ಬಾಗೇವಾಡಿ), ಅಶೋಕ್ ಎಂ.ಮನಗೋಳಿ (ಸಿಂಧಗಿ), ಶ್ರೀನಿವಾಸ (ಗುಬ್ಬಿ), ನಯನಾ ಮೋಟಮ್ಮ, ಚಲುವರಾಯಸ್ವಾಮಿ, ನಯನಾ ಮೋಟಮ್ಮ (ಮೂಡಿಗೆರೆ), ಶ್ರೀನಿವಾಸಯ್ಯ (ನೆಲಮಂಗಲ), ನಾ.ರಾ.ಭರತರೆಡ್ಡಿ (ಬಳ್ಳಾರಿ), ಗಣೇಶ್ (ಕಂಪ್ಲಿ), ರಾಮಲಿಂಗಾರೆಡ್ಡಿ (ಬಿಟಿಎಂ ಲೇಔಟ್), ಚಲುವರಾಯಸ್ವಾಮಿ (ನಾಗಮಂಗಲ), ರಮೇಶ್ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ), ಅಶೋಕ್ ಕುಮಾರ್ ರೈ (ಪುತ್ತೂರು), ದೇವೇಂದ್ರಪ್ಪ (ಜಗಳೂರು), ಪ್ರಕಾಶ್ ಕೋಳಿವಾಡ (ರಾಣೆಬೆನ್ನೂರು), ಖಾನಿಜಾ ಫಾತಿಮಾ (ಕಲಬುರಗಿ ಉತ್ತರ), ಚೆನ್ನಾರೆಡ್ಡಿ (ಯಾದಗಿರಿ),ಮಧು ಬಂಗಾರಪ್ಪ (ಸೊರಬ), ಭೀಮಣ್ಣ ನಾಯಕ್ (ಶಿರಸಿ), ಅಲ್ಲಮಪ್ರಭು ಪಾಟೀಲ್ (ಕಲಬುರಗಿ ದಕ್ಷಿಣ), ಜಿ.ಎಸ್.ಪಾಟೀಲ್ (ರೋಣ), ಸಂಗಮೇಶ್ (ಭದ್ರಾವತಿ), ಶಾಂತನಗೌಡ (ಹೊನ್ನಾಳಿ), ಬಸವನಗೌಡದದ್ದಲ್ (ರಾಯಚೂರು), ಕೆ.ಎಚ್.ಪುಟ್ಟಸ್ವಾಮಿಗೌಡ (ಗೌರಿಬಿದನೂರು) ಹೆಸರುಗಳು ಗುಪ್ತಚರ ವಿಭಾಗ ನೀಡಿರುವ ಪಟ್ಟಿಯಲ್ಲಿದೆ ಎನ್ನಲಾಗಿದೆ.

## 2ನೇ ಹಂತದ ಎಸ್‌ಐಆರ್ ಪ್ರಕ್ರಿಯೆ: ಶೇ.99 ರಷ್ಟು ಮತದಾರರಿಗೆ ಗಣತಿ ನಮೂನೆ ಹಂಚಿಕೆ

• ಪ್ರಜೋದಯ ವರದಿ

**ನವದೆಹಲಿ:** ಒಂಬತ್ತು ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಎರಡನೇ ಹಂತದಲ್ಲಿ ಶೇ.99ಕ್ಕೂ ಹೆಚ್ಚು ಗಣತಿ ನಮೂನೆ ಅರ್ಜಿಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

50.97 ಕೋಟಿ ಮತದಾರರಲ್ಲಿ 50.50 ಕೋಟಿಗೂ ಹೆಚ್ಚು ಜನರಿಗೆ ಗಣತಿ ನಮೂನೆಗಳನ್ನು ನೀಡಲಾಗಿದೆ ಎಂದು ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಐಆರ್ ಪ್ರಕ್ರಿಯೆಯು ನ.4 ರಂದು ಆರಂಭವಾಗಿದ್ದು, ಡಿ.4 ರವರೆಗೆ ನಡೆಯಲಿದೆ. ಮೂರು ಕೇಂದ್ರಾಡಳಿತ ಪ್ರದೇಶ ಮತ್ತು ಒಂಬತ್ತು ರಾಜ್ಯಗಳಾದ ಛತ್ತೀಸಗಢ, ಗೋವಾ, ಗುಜರಾತ್, ಕೇರಳ, ಮಧ್ಯಪ್ರದೇಶ, ರಾಜಸ್ಥಾನ, ತಮಿಳು ನಾಡು, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಪುದುಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಎರಡನೇ ಹಂತದ ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿದೆ.

ಈ ಪೈಕಿ ತಮಿಳುನಾಡು, ಪುದುಚೇರಿ, ಕೇರಳ ಮತ್ತು ಪಶ್ಚಿಮ ಬಂಗಾಳದಲ್ಲಿ 2026ರಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಅಸ್ಸಾಂನಲ್ಲಿ 2026ರಲ್ಲಿ ವಿಧಾನಸಭೆ ಚುನಾವಣೆ ನಡೆಯಲಿದೆ. ಇಲ್ಲಿ ಪ್ರತ್ಯೇಕವಾಗಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆ ನಡೆಯಲಿದೆ.

## ಇಂದು ಕುರುಕ್ಷೇತ್ರ ನಾಟಕ ಪ್ರದರ್ಶನ

**ಹಾಸನ:** ತಾಲ್ಲೂಕಿನ ಕಟ್ಟಾಯ ಹೋಬಳಿ ಮುಕುಂದೂರು ಗ್ರಾಮದಲ್ಲಿ ಶ್ರೀ ಗುರು ಮಲ್ಲೇಶ್ವರ ಮತ್ತು ಬಿಂದಿಗೆಮ ಜಾತ್ರೆ ಪ್ರಯುಕ್ತ ನ.25ರ ಮಂಗಳವಾರ ರಾತ್ರಿ 8 ಗಂಟೆಗೆ ಶ್ರೀ ಮಲ್ಲೇಶ್ವರ ಕೃಪೋಷಿತ ನಾಟಕ ಮಂಡಳಿ ವತಿಯಿಂದ ಕುರುಕ್ಷೇತ್ರ ಅಥವಾ ಛಲದೋಳ್ ದುರ್ಯೋಧನ ಎಂಬ ಪೌರಾಣಿಕ ನಾಟಕ ಪ್ರದರ್ಶನ ಹಮಿಕೊಳ್ಳಲಾಗಿದೆ.

ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರೋತ್ಸಾಹಿಸಬೇಕೆಂದು ಮುಕುಂದೂರು, ಹೊಸಳ್ಳಿ,ಕುಂದೂರು,ಮಲ್ಲೇನಹಳ್ಳಿ ಗ್ರಾಮಸ್ಥರು ಕೋರಿದ್ದಾರೆ.

## ಮಕ್ಕಳ ಮಾರಾಟ ಘೋರ ಅಪರಾಧ

• ಪ್ರಜೋದಯ ವರದಿ

**ಹಾಸನ:** ಮಕ್ಕಳನ್ನು ಅನಧಿಕೃತವಾಗಿ ಮಾರಾಟ ಮಾಡುವುದು ಬಾಲ ನ್ಯಾಯ ಕಾಯ್ದೆಯಡಿ ಘೋರ ಅಪರಾಧವಾಗಿದ್ದು ಮಕ್ಕಳ ಮಾರಾಟ ಮಾಡುವವರಿಗೆ ಹಾಗು ಕೊಳ್ಳುವವರಿಗೂ 5 ವರ್ಷಗಳ ಸೆರೆವಾಸದ ಜೊತೆಗೆ ರೂ.1 ಲಕ್ಷ ರೂ. ದಂಡ ವಿಧಿಸಲಾಗುತ್ತದೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ.ದಿಲೀಪ್ ಅವರು ಎಚ್ಚರಿಕೆ ನೀಡಿದರು.

ನಗರದ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಸರ್ಕಾರಿ ಕಾನೂನು ಕಾಲೇಜು ವತಿಯಿಂದ ಸೋಮವಾರ ಹಮ್ಮಿಕೊಂಡಿದ್ದ ದತ್ತು ಮಾಸಾಚರಣೆ- ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಅಪರಾಧದಲ್ಲಿ ಆಸ್ಪತ್ರೆಯ ಸಿಬ್ಬಂದಿ ಶಾಮೀಲಾದರೆ 7 ವರ್ಷ ಸೆರೆವಾಸ ಹಾಗೂ 1 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಅನಾಥ, ನಿರ್ಗತಿಕ, ಬೇಡವಾದ ಅಥವಾ ತಂದೆ-ತಾಯಿಯಿಂದ ತ್ಯಜಿಸಲ್ಪಟ್ಟ ಮಕ್ಕಳನ್ನು ಬಾಲ ನ್ಯಾಯ ಕಾಯ್ದೆ-2015 ಮತ್ತು ದತ್ತು ನಿಯಮಗಳು-2017ರ ಅನ್ವಯ ಕಾನೂನು ಬದ್ಧವಾಗಿ ದತ್ತು ನೀಡಲಾಗುತ್ತದೆ.



ಮಕ್ಕಳನ್ನು ದತ್ತು ಪಡೆಯಲು ಅಂತರ್ ಜಾಲತಾಣದಲ್ಲಿ ನೊಂದಣೆ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ನಗರದಲ್ಲಿರುವ ವಿಶೇಷ ದತ್ತು ಸಂಸ್ಥೆಗಳಾದ ತವರು ಪಬ್ಲಿಕ್ ಚಾರಿಟೆಬಲ್ ಟ್ರಸ್ಟ್, ಕಾಮಧೇನು ಶಿಶು ಮಂದಿರ ಅಥವಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಚೇರಿ ಸಂಪರ್ಕಿಸಬೇಕೆಂದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕಾಂತರಾಜು ಮಾತನಾಡಿ, ಮಕ್ಕಳು ನಮ್ಮ ದೇಶ ಮತ್ತು ಕುಟುಂಬದ ಅಮೂಲ್ಯ ಸಂಪತ್ತು. ಅವರಿಗೆ ಉತ್ತಮ ಜೀವನ ಕಲ್ಪಿಸುವುದು ಕುಟುಂಬದ ಜವಾಬ್ದಾರಿ. ಮಕ್ಕಳನ್ನು ಕಾನೂನು ಬದ್ಧವಾಗಿ ದತ್ತು ಪಡೆಯದಿದ್ದರೆ ಮುಂದೆ ಮಗುವಿನ ಬೆಳವಣಿಗೆ ಮತ್ತು ಮನಸ್ಸಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ಮಕ್ಕಳಿಲ್ಲದ ಅಥವಾ ದತ್ತು ಪಡೆಯಲು ಆಸಕ್ತಿ ಇರುವ ದಂಪತಿ ಕಾನೂನು ಬದ್ಧವಾಗಿ ದತ್ತು ಪಡೆಯಬೇಕು. ಆಸ್ಪತ್ರೆಗೆ ಬರುವ ಪೋಷಕರು ವೈದ್ಯರಲ್ಲಿ, ನರ್ಸಿಂಗ್ ಸಿಬ್ಬಂದಿಯಲ್ಲಿ ನಮ ಗೊಂದು ಮಗು ಕೊಡಿಸಿ ಎಂದು ಕೇಳುವುದು ಸಾಮಾನ್ಯ. ಇಂತಹ ಸಂದರ್ಭಗಳಲ್ಲಿ ಸರಿಯಾದ ಮಾಹಿತಿ ನೀಡಿ ಕಾನೂನು ಬದ್ಧವಾಗಿ ಮಗು ಪಡೆಯಲು ಮಾರ್ಗದರ್ಶನ ನೀಡಿ ಎಂದರು.

ಈಗ ಅಂತರ್‌ಜಾಲತಾಣಗಳಲ್ಲಿ ಎಲ್ಲಾ ಮಾಹಿತಿ ಲಭ್ಯವಿದೆ. ಹೆಚ್ಚಿನ ಮಾಹಿತಿಗೆ a a g ಸಂಪರ್ಕಿಸಬಹುದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ರತ್ನಮ್ಮ ಅಧ್ಯಕ್ಷತೆ ವಹಿಸಿದ್ದರು. ಮಕ್ಕಳ ತಜ್ಞ ಡಾ|| ಕೋನಾಸಾಗರ, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಅನುದಾನಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿ

» ಮೊದಲನೇ ಪುಟದಿಂದ

ಪುಟ್ಟಸ್ವಾಮಿಗೌಡ ಅವರು ಸಂಸದರಾದ ಸಮಯದಲ್ಲಿ ಅಂಬೇಡ್ಕರ್ ನಗರದಲ್ಲಿ 2 ಸಮುದಾಯ ಭವನಗಳನ್ನು ನಿರ್ಮಿಸಿದ್ದು ಅವುಗಳನ್ನು ಅಭಿವೃದ್ಧಿಪಡಿಸಲು ತಾವು ಮುಂದಾಗಬೇಕೆಂದು ಗ್ರಾಮಸ್ಥರು ಸಂಸದರ ಬಳಿ ತಿಳಿಸಿದಾಗ, ಎರಡು ಭವನಗಳನ್ನು ದುರಸ್ತಿ ಪಡಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಹಲವು ವರ್ಷಗಳಿಂದ ದುಸ್ಥಿತಿ ಹಂತ ತಲುಪಿರುವ ಎಂಎಂಎಕೆ ಹಳೆಯ ಶಾಲಾ ಕಟ್ಟಡವನ್ನು ಪುರಸಭೆಗೆ ಹತ್ತಾಂ ತರಿಸಿ ಆ ಜಾಗದಲ್ಲಿ ಅಂಬೇಡ್ಕರ್ ಗ್ರಂಥಾಲಯ ಹಾಗು ಸ್ತ್ರೀಶಕ್ತಿ ಭವನ ವನ್ನು ನಿರ್ಮಾಣ ಮಾಡಿಸುವ ಕುರಿತು ಸಂಬಂಧ ಪಟ್ಟವರ ಗಮನ ಸೆಳೆಯ ಬೇಕೆಂದು ಸಂಸದರಲ್ಲಿ ಮನವಿ ಮಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ.ಲಕ್ಷ್ಮಣ, ಪುರಸಭೆ ಮಾಜಿ ಅಧ್ಯಕ್ಷ ಪುಟ್ಟರಾಜು, ಎಪಿಎಂಸಿ ಮಾಜಿ ಉಪಾಧ್ಯಕ್ಷ ರಂಗಸ್ವಾಮಿ, ಹಿರಿಯ ನಿವೃತ್ತ ವಿಜ್ಞಾನಿ ಪಿ.ಅಣ್ಣಯ್ಯ, ಮುಖಂಡರಾದ ರಾಘವೇಂದ್ರ, ಕೆ.ಕೆ.ಶೋಭಾ, ರಾಜೇಶ್, ಕೃಷ್ಣ, ಕೃಷ್ಣಮೂರ್ತಿ, ಹೆಚ್.ಆರ್.ಪಾರ್ವತಿ, ರಂಗಸ್ವಾಮಿ, ವೆಂಕಟೇಶ್, ಶಂಕರ್ ಹಾಜರಿದ್ದರು.

## ರಾಮ ಮಂದಿರ ಕಾಮಗಾರಿ ಪೂರ್ಣ: ಇಂದು ಮೋದಿ ಭೇಟಿ

• ಪ್ರಜೋದಯ ವರದಿ



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ನ.25ರ ಮಂಗಳವಾರ ಅಯೋಧ್ಯೆಗೆ ಭೇಟಿ ನೀಡಲಿದ್ದು, ರಾಮ ಮಂದಿರ ನಿರ್ಮಾಣ ಪೂರ್ಣಗೊಂಡಿದ್ದನ್ನು ಸಾಂಕೇತಿಕವಾಗಿ ಸೂಚಿಸಲು ದೇವಾಲಯದ ಶಿಖರದ ಮೇಲೆ ಕೇಸರಿ ಧ್ವಜವನ್ನು ಹಾರಿಸಲಿದ್ದಾರೆ.

10 ಅಡಿ ಎತ್ತರ ಮತ್ತು 20 ಅಡಿ ಉದ್ದದ ತ್ರಿಕೋನ ಧ್ವಜವು ಭಗವಾನ್ ರಾಮನ ತೇಜಸ್ಸು ಮತ್ತು ಶೌರ್ಯವನ್ನು ಸಂಕೇತಿಸುವ ಸೂರ್ಯನ ಚಿತ್ರವನ್ನು ಹೊಂದಿದೆ. ಅದರ ಮೇಲೆ ಓಂ ಅನ್ನು ಕೆತ್ತಲಾಗಿದೆ ಎಂದು ಪ್ರಧಾನಿ ಕಚೇರಿ (ಪಿಎಂಒ) ತಿಳಿಸಿದೆ.

ಪವಿತ್ರ ಕೇಸರಿ ಧ್ವಜವು ಘನತೆ, ಏಕತೆ ಮತ್ತು ಸಾಂಸ್ಕೃತಿಕ ನಿರಂತರತೆಯ ಸಂದೇಶವನ್ನು ಸಾರುತ್ತದೆ. ರಾಮ ರಾಜ್ಯದ ಆದರ್ಶಗಳನ್ನು ಸಾಕಾರಗೊಳಿಸುತ್ತದೆ. ಸಾಂಪ್ರದಾಯಿಕ ಉತ್ತರ ಭಾರತದ ನಾಗರ ವಾಸ್ತುಶಿಲ್ಪ ಶೈಲಿಯಲ್ಲಿ ನಿರ್ಮಿಸಲಾದ ಶಿಖರದ ಮೇಲೆ ಧ್ವಜವು ಹಾರಲಿದೆ. ದೇವಾಲಯದ ಸುತ್ತಲೂ ದಕ್ಷಿಣ ಭಾರತದ ವಾಸ್ತುಶಿಲ್ಪದ ವಿನ್ಯಾಸ ಮೂಡಿಬಂದಿದೆ.

ಪ್ರಧಾನಿ ಮೋದಿ ಅವರು ಸಪ್ತಮಂದಿರಕ್ಕೆ ಭೇಟಿ ನೀಡಲಿದ್ದಾರೆ. ನಂತರ ಶೇಶಾವತರ್ ಮಂದಿರಕ್ಕೆ ಭೇಟಿ ನೀಡಲಿದ್ದಾರೆ. ಮಾತಾ ಅನ್ನಪೂರ್ಣ ಮಂದಿರಕ್ಕೂ ಭೇಟಿ ನೀಡಲಿರುವ ಮೋದಿ, ರಾಮ ದರ್ಬಾರ್ ಗರ್ಭಗೃಹದಲ್ಲಿ ದರ್ಶನ ಮತ್ತು ಪೂಜೆ ಸಲ್ಲಿಸಲಿದ್ದಾರೆ. ನಂತರ ರಾಮ ಲಲ್ಲಾನ ದರ್ಶನ ಪಡೆಯಲಿದ್ದಾರೆಯೆಂದು ಪ್ರಕಟಣೆಯಲ್ಲಿ ತಿಳಿಸಿದೆ.

### ಸ್ವಲ್ಪ ಎಚ್ಚರ ತಪ್ಪಿದರೂ ತೊಂದರೆ ಗ್ಯಾರಂಟಿ: ಭಾನುಮತಿ

## ಸಾಮಾಜಿಕ ಜಾಲತಾಣಗಳ ಸಾಧಕ-ಬಾಧಕ ಅರಿಯಿರಿ

• ಪ್ರಜೋದಯ ವರದಿ

**ಹಾಸನ:** ಆಧುನಿಕತೆ ಬೆಳೆದಂತೆ ತಂತ್ರಜ್ಞಾನವು ನಿರೀಕ್ಷೆ ಮೀರಿ ಅಭಿವೃದ್ಧಿ ಹೊಂದುತ್ತಿದ್ದು ಅದರ ಸಾಧಕ-ಬಾಧಕಗಳನ್ನು ಅರಿತು ಬಳಕೆ ಮಾಡಬೇಕು. ಸ್ವಲ್ಪ ಎಚ್ಚರ ತಪ್ಪಿದರೂ ತೊಂದರೆ ಅನುಭವಿಸಬೇಕಾಗುತ್ತದೆಂದು ಸನ್ ಶೈನ್ ಲೀಜನ್ ಅಧ್ಯಕ್ಷೆ ಭಾನುಮತಿ ಅವರು ಹೇಳಿದರು.





ನಗರದ ಮಹಾರಾಜ ಪಾರ್ಕ್‌ನ ಓಂ ಯೋಗ ಕೇಂದ್ರದಲ್ಲಿ ಸೀನಿಯರ್ ಚೇಂಬರ್ ಇಂಟರ್‌ನ್ಯಾಷನಲ್ ಸನ್ ಶೈನ್ ಲೀಜನ್‌ನ ನಾಲ್ಕು ಯುವ ಘಟಕಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ, ಯುವಕ-ಯುವತಿಯರು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯರಾಗಿದ್ದಾರೆ. ಸುಲಭದ ಇಂಟರ್‌ನೆಟ್ ಮನಸ್ಸಿನ ಮೇಲೆ ಗಾಢ ಪರಿಣಾಮ ಬೀರುತ್ತದೆ. ಫೇಸ್‌ಬುಕ್, ಇನ್‌ಸ್ಟಾಗ್ರಾಂ ಸೇರಿ ಅನೇಕ ಆ್ಯಪ್‌ಗಳು ಉಪಯೋಗ ಎಷ್ಟಿವೆಯೋ ಅಷ್ಟೇ ಅಪಾಯಕಾರಿ ಆಗಿವೆ. ಆದ್ದರಿಂದ ಮೊಬೈಲ್ ಬಳಕೆ ಕಡಿಮೆ ಮಾಡಿ ಬೇರೆ ಕೆಲಸಗಳತ್ತ ಗಮನ ಹರಿಸಬೇಕು. ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಜನಸಂಪರ್ಕ ಹೆಚ್ಚಾಗಿ ಜ್ಞಾನ ವೃದ್ಧಿಯಾಗುತ್ತದೆ. ಮುಖ್ಯವಾಗಿ ಯುವಕರು ಸಂವಹನ, ಸಂಪರ್ಕ ಕೌಶಲ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ಹದಿಹರೆಯದಲ್ಲಿ ದುಶ್ಚಟ, ದುರಾಭ್ಯಾಸ, ದುರ್ನಡತೆಗೆ ಮನಸ್ಸು ಕೊಡದೆ ಒಳ್ಳೆಯ ದಾರಿಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು. ಗುರು ಹಿರಿಯರಿಗೆ ಗೌರವಿಸುವ ಹಾಗು ಸೇವಾ ಮನೋಭಾವ ಬೆಳೆಸಿಕೊಳ್ಳಬೇಕೆಂದರು.

ಸನ್ ಶೈನ್ ಲೀಜನ್ ರಾಷ್ಟ್ರೀಯ ಯುವ ವಿಭಾಗ ಸಂಯೋಜಕ ಹುಸೇನ್ ಬೈಕಾಡಿ ಅವರು ಮಾತನಾಡಿ, ಮಕ್ಕಳು ಓದಿಗೆ ಹೆಚ್ಚಿನ ಗಮನ ಹರಿಸಬೇಕು. ಸಾಮಾಜಿಕ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಕ್ರೀಡಾ ಪರಿಷತ್ ಕಾರ್ಯದರ್ಶಿ ನಿರಂಜನ್ ರಾಜ್ ಅವರು ಮಾತನಾಡಿ, ಯುವಕ- ಯುವತಿಯರು ವ್ಯಾಯಾಮ, ಆರೋಗ್ಯ, ಶಿಕ್ಷಣಕ್ಕೆ ಗಮನ ನೀಡುತ್ತಾ ಆರೋಗ್ಯಕರ ಬದುಕು ಕಟ್ಟಿಕೊಳ್ಳಬೇಕೆಂದರು.

ಸನ್ ಶೈನ್ ಲೀಜನ್‌ನ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಯುವ ಘಟಕ, ಅಧ್ಯಯನ ಪ್ರೀ ಯುನಿವರ್ಸಿಟಿ ಕಾಲೇಜಿನ ಒಂದು ಯುವ ಘಟಕ, ಜನನಿ ಫೌಂಡೇಶನ್ ವತಿಯಿಂದ ಒಂದು ಯುವ ಘಟಕ ಹಾಗು ಕ್ರೀಡಾ ಪರಿಷತ್ ಮತ್ತು ಯೋಗ ಸಂಸ್ಥೆಯಿಂದ ತಲಾ ಒಂದು ಘಟಕ ಉದ್ಘಾಟಿಸಲಾಯಿತು.

ಸನ್ ಶೈನ್ ಲೀಜನ್ ಕಾರ್ಯದರ್ಶಿ ಭಾಗ್ಯ, ಖಜಾಂಚಿ ಶ್ವೇತಾ, ನಾಗೇಶ್ ಪ್ರಸಾದ್, ವಿದ್ಯಾರ್ಥಿಗಳು, ಸಿಬ್ಬಂದಿಗಳು ಸೇರಿದಂತೆ ಇನ್ನಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಉನ್ನತ ಗುರಿ ತಲುಪಲು ನಿರಂತರ ಪ್ರಯತ್ನವಿರಲಿ

### ಉಪಕುಲಪತಿ ಡಾ.ಎಸ್.ಎನ್.ಶ್ರೀಧರ್

• ಪ್ರಜೋದಯ ವರದಿ

**ಹಾಸನ:** ತಮ್ಮ ಭವಿಷ್ಯ ಉಜ್ವಲವಾಗಿರಲೆಂದು ತಂದೆ-ತಾಯಿ ಅನುಭವಿಸುವ ಸಂಕಷ್ಟಗಳನ್ನು ಸ್ಮರಿಸಿ ವಿದ್ಯಾರ್ಥಿಗಳು ಉತ್ತಮ ವ್ಯಾಸಂಗ ಮಾಡುವ ಮೂಲಕ ಜೀವನದಲ್ಲಿ ಉನ್ನತ ಗುರಿ ತಲುಪಬೇಕೆಂದು ಆದಿಚುಂಚನಗಿರಿ ವಿಶ್ವವಿದ್ಯಾಲಯ ಉಪಕುಲಪತಿ ಡಾ.ಎಸ್.ಎನ್. ಶ್ರೀಧರ್ ಅವರು ಹೇಳಿದರು.

ನಗರದ ರಾಜೀವ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಡೆದ ಪ್ರಥಮ ವರ್ಷದ ಇಂಜಿನೀಯರಿಂಗ್ ತರಗತಿಗಳ ಪ್ರಾರಂಭೋತ್ಸವದಲ್ಲಿ ಮಾತನಾಡಿ, ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾಗಿದ್ದು ಸಮಯ ವ್ಯರ್ಥ ಮಾಡದೆ ಅಭ್ಯಾಸದಲ್ಲಿ ತೊಡಗಬೇಕು. ಹೆತ್ತ ತಂದೆ-ತಾಯಿ ಹಾಗು ವಿದ್ಯೆ ಕಲಿಸಿದ ಗುರುಗಳಿಗೆ ಕೀರ್ತಿ ತರಬೇಕು. ಪ್ರಸ್ತುತ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳ ಬಳಕೆ ಮಿತಿ ಮೀರಿದೆ. ಆಧುನಿಕ ತಂತ್ರಜ್ಞಾನದಿಂದ ಲಾಭ ಎಷ್ಟಿದೆಯೋ ನಷ್ಟವೂ ಅಷ್ಟೇ ಇದೆ. ಅವಶ್ಯಕತೆಗೆ ತಕ್ಕಷ್ಟು ಮಾತ್ರ ಮೊಬೈಲ್ ಬಳಕೆ ಮಾಡಬೇಕು. ಉತ್ತಮ ಉದ್ಯೋಗ ಪಡೆಯುವ ನಿಟ್ಟಿನಲ್ಲಿ ತಾವು ಪದವಿಯಲ್ಲಿ ಪಡೆದಿರುವ ಅಂಕಗಳ ಜೊತೆಗೆ ಯಾವ ರೀತಿಯ ಗುಣ ಬೆಳೆಸಿಕೊಳ್ಳುತ್ತೀರಿ ಎಂಬುದು ಮುಖ್ಯವಾಗುತ್ತದೆ ಎಂದು ಅವರು ಹೇಳಿದರು.





ಪ್ರಾಂಶುಪಾಲ ಡಾ.ಪಿ.ಕೆ. ಮಹೇಶ್ ಅವರು ಮಾತನಾಡಿ, ಸಂಸ್ಥೆಯಲ್ಲಿ ಲಭ್ಯವಿರುವ ಕೋರ್ಸ್‌ಗಳ ವಿವರ ಹಾಗು ಸಂಸ್ಥೆಯ ನೀತಿ ನಿಯಮಗಳ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ರಾಜೀವ್ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಡಾ.ಬಿ.ಎನ್.ರತ್ನ ಅವರು ಮಾತನಾಡಿ, ಸಂಸ್ಥೆಯಲ್ಲಿ ಲಭ್ಯವಿರುವ ಅತ್ಯಾಧುನಿಕ ಸವಲತ್ತುಗಳನ್ನು ಬಳಸಿಕೊಂಡು ಆ ಮೂಲಕ ಅಭಿವೃದ್ಧಿ ಹೊಂದಿ ಸಂಸ್ಥೆಗೆ ಕೀರ್ತಿ ತರಬೇಕೆಂದರು.

ಸಂಸ್ಥೆಯ ಅಧ್ಯಕ್ಷೆ ಡಾ.ರಚನಾ ರಾಜೀವ್, ಉಪಾಧ್ಯಕ್ಷ ಡಾ. ರಂಜಿತ್ ಹಾಗು ಇತರರಿದ್ದರು.

## ಲಾರಿ ಡಿಕ್ಕಿ: ಬೈಕ್ ಸವಾರ ಸಾವು

**ಕೊಣನೂರು:** ಲಾರಿ ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಅರಕಲಗೂಡು ತಾಲ್ಲೂಕಿನ ಕೇರಳಾಪುರ-ರಾಮನಾಥಪುರ ಮುಖ್ಯ ರಸ್ತೆಯ ತಿರುಮಲ ಡೈರಿ ಸಮೀಪ ಭಾನುವಾರ ನಡೆದಿದೆ.

ರಾಮನಾಥಪುರ ಹೋಬಳಿ ಗರುಡನಹಳ್ಳಿ ಗ್ರಾಮದ ಸ್ವಾಮಿಗೌಡ (52) ಮೃತರು. ಕಾರ್ಯನಿಮಿತ್ತ ಕೇರಳಾಪುರಕ್ಕೆ ಹೋಗುತ್ತಿದ್ದಾಗ ಹಿಂದಿನಿಂದ ವೇಗವಾಗಿ ಬಂದ ಲಾರಿ ಮುಂದೆ ಹೊರಟಿದ್ದ ಬೈಕ್‌ಗೆ ಡಿಕ್ಕಿಯಾಗಿದೆ.

ಅಪಘಾತದ ರಭಸಕ್ಕೆ ಸ್ವಾಮಿಗೌಡ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಜಾಹಿರಾತಿಗಾಗಿ ಸಂಪರ್ಕಿಸಿ
8747042279

HOUSE FOR SALE
A newly constructed house with site measuring 20' NS×30' EW and 3 storeyed house with 1800 sqft located at NH 75 B.M road bypass Bommanayakanhalli extn. Ward no.35, Hassan is for sale.
Contact
9448126779
8088349615

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK